ಗರಿಷ್ಠ 32 c | ಕನಿಷ್ಠ 21 c

ಮಳೆ ಆರಂಭಕ್ಕೂ ಮೊದಲು ತ್ವರಿತ ಕಾಮಗಾರಿ ಸೂಚನೆ

ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ ಜಿಲ್ಲಾ ಮಟ್ಟದ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯಲ್ಲಿ ಸಚಿವ

• **ಕನ್ನಡಪ್ರಭ ವಾರ್ತೆ** ಮಡಿಕೇರಿ

ಜೂನ್ ಮೊದಲ ವಾರದಲ್ಲಿ ಮುಂಗಾರು ಆರಂಭವಾಗುವ ಸಾಧ್ಯತೆ ಇದ್ದು, ರಸ್ತೆ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸುವಂತೆ ಕೊಡಗು ಜಿಲ್ಲಾ ಉಸ್ತುವಾರಿ ಸಚಿವರಾದ ಎನ್.ಎಸ್ .ಭೋಸರಾಜು ತಾಕೀತು ಮಾಡಿದ್ದಾರೆ.

ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಮಂಗಳವಾರ ನಡೆದ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ ಜಿಲ್ಲಾ ಮಟ್ಟದ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕೊಡಗು ಜಿಲ್ಲೆಯಾದ್ಯಂತ ಲೋಕೋಪಯೋಗಿ, ಪಂಚಾಯತ್ ರಾಜ್ ವ್ಯಾಪ್ತಿಯ ರಸ್ತೆಗಳ ಗುಂಡಿ ಮುಚ್ಚುವುದು ಸೇರಿದಂತೆ ಅಗತ್ಯ ಕಾಮಗಾರಿ ಕೈಗೊಳ್ಳಬೇಕು ಎಂದು ಸಚಿವರು ನಿರ್ದೇಶನ ನೀಡಿದರು.

ಈ ಕುರಿತು ಮಾತನಾಡಿದ ಶಾಸಕ ಡಾ. ಮಂತರ್‌ಗೌಡ ಮಡಿಕೇರಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ರಸ್ತೆ ಕಾಮಗಾರಿ ತ್ವರಿತವಾಗಿ ಪೂರ್ಣಗೊಳಿಸಬೇಕು. ಜೊತೆಗೆ ಗುಣಮಟ್ಟದ ಕಾಮಗಾರಿ ಕೈಗೊಳ್ಳುವಂತೆ ಸೂಚಿಸಿದರು.

ರಾಜ್ಯದಲ್ಲಿ ರಸ್ತೆ ನಿರ್ವಹಣೆಗಾಗಿ ಸರ್ಕಾರ ನೂರಾರು ಕೋಟಿ ರು.. ನೀಡಿದೆ. ಆದರೆ ಎಂಜಿನಿಯರ್‌ಗಳು ಸರಿಯಾದ ಸಮಯಕ್ಕೆ ಕೆಲಸ ಮಾಡದೆ ಸರ್ಕಾರಕ್ಕೆ ಕೆಟ್ಟ ಹೆಸರು ತರುತ್ತಿರುವುದು ಸರಿಯಲ್ಲ. ಸರ್ಕಾರ ಅಭಿವೃದ್ಧಿಗಾಗಿ ಹಣ ನೀಡಿದರೂ ಸಹ ಬಳಸದಿರುವುದು ಬೇಸರ ತರುತ್ತದೆ ಎಂದು ಹೇಳಿದರು.

ಕ್ರೀಡಾ ಪ್ರಾಧಿಕಾರದ ಉಪಾಧ್ಯಕ್ಷರಾದ ಸಿ. ಎಸ್.ಅರುಣ್ ಮಾಚಯ್ಯ ಅವರು ಕರಿಕೆ ರಸ್ತೆ ಸೇರಿದಂತೆ ಬಹುತೇಕ ರಸ್ತೆಗಳ ಕಾಮಗಾರಿ ಬಾಕಿ ಇದ್ದು, ಕಾಮಗಾರಿ ತುರ್ತಾಗಿ ಕೈಗೊಳ್ಳಬೇಕು ಎಂದರು.

ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷರಾದ ತೀತಿರ ಧರ್ಮಜ ಉತ್ತಪ್ಪ ಅವರು ಬಿಟ್ಟಂಗಾಲ, ತಿತಿಮತಿ, ಬಾಳುಗೋಡು ಸೇರಿದಂತೆ ಹಲವು ರಸ್ತೆ ಸರಿಪಡಿಸಬೇಕು ಎಂದು ಹೇಳಿದರು.

ಸಮಿತಿ ಸದಸ್ಯರಾದ ಅಬ್ದುಲ್ ರೆಹಮಾನ್ ಅವರು ನಾಪೋಕ್ಲು ಕ್ರೀಡಾ ಮೈದಾನದಲ್ಲಿ ಮಳೆಗಾಲದ ಅವಧಿಯಲ್ಲಿ ಮಕ್ಕಳು ಓಡಾಡಲು ತೊಂದರೆಯಾಗಲಿದೆ. ಆದ್ದರಿಂದ ಮಕ್ಕಳ ಓಡಾಟಕ್ಕೆ ಅನುಕೂಲ ಮಾಡಬೇಕು ಎಂದರು.

ಲೋಕೋಪಯೋಗಿ ಇಲಾಖೆ ವ್ಯಾಪ್ತಿಯ ಕಟ್ಟಡಕ್ಕೆ ಸಂಬಂಧಿಸಿದಂತೆ ಶಾಸಕರು ಮಾಹಿತಿ ಪಡೆದರು.

ಧರ್ಮಜ ಉತ್ತಪ್ಪ ಅವರು ಲೋಕೋಪಯೋಗಿ ಇಲಾಖೆಯ ಪ್ರವಾಸಿ ಮಂದಿರದ ಕೊಠಡಿ ಶುಚಿತ್ವವಾಗಿಲ್ಲ. ಸರಿಯಾದ ನಿರ್ವಹಣೆ ಆಗಬೇಕು ಎಂದು ಸಲಹೆ ಮಾಡಿದರು.

ಸೆಸ್ಕ್ ಸಂಬಂಧಿಸಿದಂತೆ ಮಾಹಿತಿ ಪಡೆದ ಜಿಲ್ಲಾ ಉಸ್ತುವಾರಿ ಸಚಿವರು ಎರಡು ವಿಧಾನಸಭಾ ಕ್ಷೇತ್ರಕ್ಕೆ ತಲಾ 110 ಕೋಟಿ ರು..ವನ್ನು ಸರ್ಕಾರ ಬಿಡುಗಡೆ ಮಾಡಿದ್ದು, ಆ ನಿಟ್ಟಿನಲ್ಲಿ ಸಮರ್ಪಕ ವಿದ್ಯುತ್ ಪೂರೈಕೆಗೆ ಗಮನಹರಿಸಬೇಕು ಎಂದು ಸೂಚಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸೆಸ್ಕ್ ಇಇ ರಾಮಚಂದ್ರ ಅವರು 70 ಮಂದಿ ಗ್ಯಾಂಗ್‌ಮೆನ್‌ಗಳು ಕಾರ್ಯನಿರ್ವಹಿಸುತ್ತಿದ್ದು, ವಿದ್ಯುತ್ ಪೂರೈಕೆಯಲ್ಲಿ ಯಾವುದೇ ರೀತಿಯ ತೊಂದರೆಯುಂಟಾಗದಂತೆ ಗಮನಹರಿಸಲಾಗಿದೆ ಎಂದರು.

ಶಾಸಕ ಡಾ.ಮಂತರ್‌ಗೌಡ ಮಾತನಾಡಿ ಅರಣ್ಯ ಇಲಾಖೆ ಅಧಿಕಾರಿಗಳು ಮಾನವೀಯತೆಯಿಂದ ಕೆಲಸ ನಿರ್ವಹಿಸಬೇಕು. ವಿದ್ಯುತ್ ಸಂಪರ್ಕ ಮತ್ತಿತರ ಮೂಲ ಸೌಲಭ್ಯಕ್ಕೆ ಹೆಚ್ಚಿನ ಒತ್ತು ನೀಡಬೇಕು ಎಂದು ಹೇಳಿದರು.

ಜಲಜೀವನ್ ಮಿಷನ್ ಯೋಜನೆ ಸಂಬಂಧಿಸಿದಂತೆ ಮಾಹಿತಿ ಪಡೆದ ಜಿಲ್ಲಾ ಉಸ್ತುವಾರಿ ಸಚಿವರು ಶೇ.50 ರಷ್ಟು ಕಾಮಗಾರಿ ತೃಪ್ತಿದಾಯಕವಾಗಿಲ್ಲ. ನೀರಿನ ಸಂಪನ್ಮೂಲ ಪಡೆಯುವ ಬಗ್ಗೆ ಚಿಂತಿಸಬೇಕಿದೆ ಎಂದು ಹೇಳಿದರು.

ಶಾಸಕ ಡಾ.ಮಂತರ್‌ಗೌಡ ಅವರು 450 ಕೋಟಿ ರು. ಕಾಮಗಾರಿಯನ್ನು ಕೈಗೊಳ್ಳಲಾಗಿದೆ. ಇದು ಎಷ್ಟರ ಮಟ್ಟಿಗೆ ಸಾರ್ವಜನಿಕರಿಗೆ ತಲುಪಿದೆ ಎಂಬ ಬಗ್ಗೆ ತನಿಖೆ ಆಗಬೇಕು ಎಂದು ಸಲಹೆ ಮಾಡಿದರು.

ಬಿಪಿಎಲ್ ಕಾರ್ಡ್‌ಗಳನ್ನು ಎಪಿಎಲ್ ಮಾಡಲಾಗಿದ್ದು, ಇದರಿಂದ ಬಡವರಿಗೆ ತೊಂದರೆಯಾಗಲಿದೆ ಎಂದು ನಗರಸಭೆ ಅಧ್ಯಕ್ಷರಾದ ಪಿ.ಕಲಾವತಿ ಅವರು ಗಮನ ಸೆಳೆದರು.

ಬಿಪಿಎಲ್ ಕಾರ್ಡ್ ಇದ್ದಲ್ಲಿ ವೈದ್ಯಕೀಯ ಚಿಕಿತ್ಸೆಗೆ ಸಹಕಾರಿಯಾಗಲಿದೆ. ಇದರಿಂದ ಬಡವರಿಗೆ ಅನುಕೂಲವಾಗಲಿದೆ. ಅದನ್ನು ಬಿಟ್ಟು ಎಪಿಎಲ್ ಮಾಡಿರುವುದು ಸರಿಯಲ್ಲ ಎಂದು ಅವರು ಸಿಟ್ಟಾದರು.

ಆಹಾರ ಇಲಾಖೆ ಉಪ ನಿರ್ದೇಶಕರಾದ ಎಂ.ಭೀಮರಾಯ ಅವರು ಮಾಹಿತಿ ನೀಡಿ ಜಿಲ್ಲೆಯಲ್ಲಿ 8,670 ಎಎವೈ, 97,046 ಬಿಪಿಎಲ್ ಚೀಟಿ ಹಾಗೂ 42,260 ಎಪಿಎಲ್ ಪಡಿತರ ಚೀಟಿ ಹೊಂದಿದ್ದಾರೆ ಎಂದು ಮಾಹಿತಿ ನೀಡಿದರು.


ಪ್ರಾಕೃತಿಕ ವಿಕೋಪ ಸಂದರ್ಭದಲ್ಲಿ ಮನೆ ಕಳೆದುಕೊಂಡ ಸಂತ್ರಸ್ತ ಕುಟುಂಬದವರಿಗೆ ಹಕ್ಕುಪತ್ರ ವಿತರಿಸಲಾಯಿತು.

■ ಜೂನ್ ಮೊದಲ ವಾರದಲ್ಲಿ ಮುಂಗಾರು ಆರಂಭವಾಗುವ ಸಾಧ್ಯತೆ ಇದ್ದು, ರಸ್ತೆ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸುವಂತೆ ಕೊಡಗು ಜಿಲ್ಲಾ ಉಸ್ತುವಾರಿ ಸಚಿವರಾದ ಎನ್.ಎಸ್.ಭೋಸರಾಜು ತಾಕೀತು ಮಾಡಿದ್ದಾರೆ.

ಜಿಲ್ಲೆಯಲ್ಲಿ ಹೊಸ ಪಡಿತರ ಚೀಟಿಗಾಗಿ ಆನ್ ಲೈನ್ ಮೂಲಕ 8,459 ಅರ್ಜಿಗಳು ಸಲ್ಲಿಕೆಯಾಗಿದ್ದು, 7,350 ಅರ್ಜಿಗಳನ್ನು ವಿಲೇವಾರಿಗೊಳಿಸಲಾಗಿದೆ. 782 ಅರ್ಜಿಗಳು ತಿರಸ್ಕೃತಗೊಂಡಿದ್ದು, 327 ಅರ್ಜಿಗಳು ಬಾಕಿ ಇದೆ ಎಂದು ವಿವರಿಸಿದರು.

ಕೃಷಿ ಇಲಾಖೆಯ ಸಹಾಯಕ ನಿರ್ದೇಶಕರು, ಸಹಾಯಕ ಕೃಷಿ ಅಧಿಕಾರಿಗಳು ಸ್ಥಳೀಯ ಮಟ್ಟದಲ್ಲಿ ಪರಿಶೀಲನೆ ನಡೆಸಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವರು ಸಲಹೆ ಮಾಡಿದರು.

ಈ ಕುರಿತು ಮಾತನಾಡಿದ ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ಚಂದ್ರಶೇಖರ್‌ಅವರು ಜಿಲ್ಲೆಯಲ್ಲಿ ರಸಗೊಬ್ಬರ ದಾಸ್ತಾನು ಇದ್ದು, ರಸಗೊಬ್ಬರ ಪೂರೈಸಲಾಗುತ್ತಿದೆ ಎಂದು ಹೇಳಿದರು.

ಜಾನುವಾರುಗಳಿಗೆ ಮೇವು ಕೊರತೆ ಆಗದಂತೆ ಗಮನಹರಿಸಬೇಕು ಎಂದು ಸಚಿವರು ಹೇಳಿದರು. ಕುಡಿಯುವ ನೀರು ಪೂರೈಕೆಯಲ್ಲಿ ವ್ಯತ್ಯಯವಾಗಬಾರದು. ಮೂಲ ಸೌಲಭ್ಯಕ್ಕೆ ಒತ್ತು ನೀಡುಂತೆ ಸಚಿವರು ಸೂಚಿಸಿದರು. ಹೋಂ ಸ್ಟೇ ಸಂಬಂಧಿಸಿದಂತೆ ಅನುಸರಿಸಬೇಕಾದ ಕ್ರಮಗಳ ಬಗ್ಗೆ ಸಭೆಯಲ್ಲಿ ಚರ್ಚೆ ನಡೆಯಿತು.

ಜಿಲ್ಲಾಧಿಕಾರಿ ಎಸ್.ಜೆ.ಸೋಮಶೇಖರ್, ಜಿ.ಪಂ.ಸಿಇಒ ಆನಂದ್ ಪ್ರಕಾಶ್ ಮೀನಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿಂದುಮಣಿ, ಉಪ ವಿಭಾಗಾಧಿಕಾರಿ ನಿತಿನ್ ಚಕ್ಕಿ, ಉಪ ಅರಣ್ಯ ಸಂರಕ್ಷಣಾಧಿಕಾರಿ ಅಭಿಷೇಕ್, ಸಮಿತಿ ಸದಸ್ಯರಾದ ಸುನಿತಾ ಮಂಜುನಾಥ್, ಅವರು ಹಲವು ವಿಚಾರಗಳ ಕುರಿತು ಮಾತನಾಡಿದರು.

ಸುದ್ದಿ ಸಿಂಚನ

ಇಂದು ಅರಣ್ಯ ಸಚಿವ ಕೊಡಗು ಜಿಲ್ಲಾ ಪ್ರವಾಸ

ಮಡಿಕೇರಿ: ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರಾದ ಈಶ್ವರ ಬಿ.ಖಂಡ್ರೆ ಬುಧವಾರ ಕೊಡಗು ಜಿಲ್ಲಾ ಪ್ರವಾಸ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ. 6 ರಂದು ಮಧ್ಯಾಹ್ನ 12 ಗಂಟೆಗೆ ದುಬಾರೆಯಲ್ಲಿ ತೂಗು ಸೇತುವೆ ನಿರ್ಮಾಣದ ಶಂಕುಸ್ಥಾಪನಾ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ಸಚಿವರ ಆಪ್ತ ಕಾರ್ಯದರ್ಶಿ ಎ.ಆರ್.ರವಿ ಅವರು ತಿಳಿಸಿದ್ದಾರೆ.

ದುಬಾರೆ ತೂಗುಸೇತುವೆ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ಇಂದು

ಮಡಿಕೇರಿ: ಕರ್ನಾಟಕ ಅರಣ್ಯ ಇಲಾಖೆ ಮತ್ತು ಲೋಕೋಪಯೋಗಿ ಇಲಾಖೆಯ ಸಹಯೋಗದಲ್ಲಿ ಬುಧವಾರ ಮಧ್ಯಾಹ್ನ 12 ಗಂಟೆಗೆ ದುಬಾರೆಯಲ್ಲಿ ನೂತನ ತೂಗುಸೇತುವೆ ನಿರ್ಮಾಣದ ಶಂಕು ಸ್ಥಾಪನೆ ಕಾರ್ಯಕ್ರಮ ನಡೆಯಲಿದೆ. ಕಾರ್ಯಕ್ರಮದಲ್ಲಿ ಸಚಿವರು, ಶಾಸಕರು ಹಾಗೂ ಗಣ್ಯರು ಪಾಲ್ಗೊಳ್ಳಲಿದ್ದಾರೆ.

ಬೈನೇ ಮರ ಬಿದ್ದು ಕೋಳಿಗೂಡು ಹಾನಿ



ನಾಪೋಕ್ಲು: ಇಲ್ಲಿಗೆ ಸಮೀಪದ ಭಾವಲಿ ಗ್ರಾಮದಲ್ಲಿ ಭಾರಿ ಮಳೆ ಗಾಳಿಗೆ ಬೈನೇ ಮರ ಬಿದ್ದು ಕೋಳಿಗೂಡು ಸಂಪೂರ್ಣ ಧ್ವಂಸವಾಗಿ ನಷ್ಟ ಸಂಭವಿಸಿದೆ. ಪಾರಾಣೆ ಗ್ರಾಮ ಪಂಚಾಯಿತಿಯ ಬಾವಲಿ ಗ್ರಾಮದ ನಿವಾಸಿ ದೇವನ ಈರಪ್ಪಎಂಬವರಿಗೆ ಸೇರಿದ ಕೋಳಿ ಗೂಡಿನ ಕಟ್ಟಡದ ಮೇಲೆ ಮಂಗಳವಾರ ಸಂಜೆ ವಿಪರೀತ ಗಾಳಿ ಮಳೆಗೆ ಬೈನೇ ಮತ್ತು ಅಡಕೆ ಮರ ಬಿದ್ದಿದೆ. ಇದರಿಂದಾಗಿ ಕೋಳಿ ಗೂಡಿನ ಚಾವಣಿಗೆ ಅಳವಡಿಸಿದ್ದ ಸಿಮೆಂಟ್ ಶೀಟ್ ಗಳು ಸೇರಿದಂತೆ ಕಟ್ಟಡ ಸಂಪೂರ್ಣ ಹಾನಿಯಾಗಿ ನಷ್ಟಸಂಭವಿಸಿದ್ದು ಕೋಳಿಗಳ ಜೀವ ಅಪಾಯದಿಂದ ಪಾರಾಗಿವೆ.

ಚುನಾವಣೆಯಲ್ಲಿ ಎನ್‌ಡಿಎ ಗೆಲುವು: ಸಿದ್ದಾಪುರ ಬಿಜೆಪಿ ವಿಜಯೋತ್ಸವ


ಪಂಚರಾಜ್ಯ ಚುನಾವಣೆ ಎನ್‌ಡಿಎಗೆ ಗೆಲುವು ಹಿನ್ನೆಲೆಯಲ್ಲಿ ಸಿದ್ದಾಪುರದಲ್ಲಿ ವಿಜಯೋತ್ಸವ ನಡೆಯಿತು.

• **ಕನ್ನಡಪ್ರಭ ವಾರ್ತೆ** ಮಡಿಕೇರಿ

ದೇಶದ ಮೂರು ಪ್ರಮುಖ ರಾಜ್ಯಗಳಾದ ಪಶ್ಚಿಮ ಬಂಗಾಳ, ಅಸ್ಸಾಂ ಹಾಗೂ ಪುದುಚೇರಿಯಲ್ಲಿ ಬಿಜೆಪಿ (ಎನ್‌ಡಿಎ) ಐತಿಹಾಸಿಕ ಗೆಲುವು ಸಾಧಿಸಿದ ಹಿನ್ನೆಲೆಯಲ್ಲಿ ಸಿದ್ದಾಪುರದಲ್ಲಿ ಬಿಜೆಪಿ ಮುಖಂಡರು, ಕಾರ್ಯಕರ್ತರು ಪಟಾಕಿ ಸಿಡಿಸಿ ಪರಸ್ಪರ ಸಿಹಿ ಹಂಚಿ ಸಂಭ್ರಮಿಸಿದರು.

ದೇಶದ ಪ್ರಧಾನಿ ನರೇಂದ್ರ ಮೋದಿ, ಪಕ್ಷದ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್ ಹಾಗೂ ಗೃಹ ಮಂತ್ರಿ ಅಮಿತ್ ಶಾ ಸೇರಿದಂತೆ ಬಿಜೆಪಿ ನಾಯಕರ ಮತ್ತು ಕಾರ್ಯಕರ್ತರ ಪರಿಶ್ರಮದ ಫಲವಾಗಿ ಇಂದು ಮೂರು ರಾಜ್ಯಗಳಲ್ಲಿ ಈ ಭರ್ಜರಿ ಜಯ ಸಾಧಿಸಲು ಸಾಧ್ಯವಾಗಿದೆ ಎಂದು ಹರ್ಷ ವ್ಯಕ್ತಪಡಿಸಿದ ಕಾರ್ಯಕರ್ತರು ಜಯ ಘೋಷಗಳನ್ನು ಕೂಗಿ ಸಂಭ್ರಮಿಸಿದರು.

ಈ ಸಂದರ್ಭ ಮಾತನಾಡಿದ ಸಿದ್ದಾಪುರ ಶಕ್ತಿಕೇಂದ್ರದ ಅಧ್ಯಕ್ಷ ರೂಪೇಶ್ ಇಂದು ನಾವು ಆಚರಿಸುತ್ತಿರುವ ಈ ವಿಜಯೋತ್ಸವ ಕೇವಲ ಗೆಲುವಿನ ಸಂಭ್ರಮವಲ್ಲ. ಇದು ಜನರ ಸೇವೆಗೆ ಸಿಕ್ಕ ಗೌರವ ಹಾಗೂ ಉತ್ತಮ ಆಡಳಿತಕ್ಕೆ ದೊರೆತ ಮನ್ನಣೆಯಾದಾಗಿದೆ. ಮುಂದಿನ ದಿನಗಳಲ್ಲಿ ಕರ್ನಾಟಕದಲ್ಲಿ ಸಹ ಬಿಜೆಪಿ ಅಧಿಕಾರಕ್ಕೆ ಬರಲಿದೆ ಕೊಡಗಿನ ಎರಡು ಕ್ಷೇತ್ರಗಳಲ್ಲಿ ಸಹ ಮತ್ತೆ ಬಿಜೆಪಿ ಅಧಿಕಾರ ಹಿಡಿಯಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಉಪಾಧ್ಯಕ್ಷ ಡಿಜಿತ್, ಗ್ರಾ.ಪಂ ಸದಸ್ಯ ಆನಂದ್, ಪ್ರಮುಖರಾದ ಕುಮಂಡ ದರ್ಶನ್, ಸುಧನಾ ಸತೀಶ್, ಸಜೀಲ್, ವಿಜೇಶ್, ಸೂರಿ, ಅನಿಲ್, ಹರೀಶ್, ಜಯಪ್ರಕಾಶ್, ಗಿರೀಶ್, ಸುಜಯ್, ಅಯ್ಯಪ್ಪ, ರಾಧಾಕೃಷ್ಣ ಸೇರಿದಂತೆ ಮತ್ತಿತರರು ಸಂಭ್ರಮಾಚರಣೆಯಲ್ಲಿ ಭಾಗಿಯಾಗಿದ್ದರು.

ಬ್ಯಾನರ್ಜಿ ದುರಾಡಳಿತ, ದೇಶ ವಿರೋಧಿ ನೀತಿಗೆ ಜನತೆ ತಕ್ಕ ಪಾಠ: ಮಹೇಶ್ ತಿಮ್ಮಯ್ಯ

• **ಕನ್ನಡಪ್ರಭವಾರ್ತೆ** ಸೋಮವಾರಪೇಟೆ

ಪಶ್ಚಿಮಬಂಗಾಳ, ಅಸ್ಸಾಂ ಹಾಗೂ ಪುದುಚೇರಿಯಲ್ಲಿ ಬಿಜೆಪಿ ಪಕ್ಷ ಜಯ ದಾಖಲಿಸಿದ ಹಿನ್ನೆಲೆ ಭಾರತೀಯ ಜನತಾ ಪಾರ್ಟಿಯ ಕಾರ್ಯಕರ್ತರು ವಿಜಯೋತ್ಸವ ಆಚರಿಸಿದರು.

ಪಟ್ಟಣದ ಖಾಸಗಿ ಬಸ್ ನಿಲ್ದಾಣದ ಪುಟ್ಟಪ್ಪ ವೃತ್ತದಲ್ಲಿ ಪಟಾಕಿ ಸಿಡಿಸಿ ಸಂಭ್ರಮಾಚರಣೆ ಮಾಡಿದರು. ಈ ಸಂದರ್ಭ ಮಾತನಾಡಿದ ಯುವ ಮೋರ್ಚಾ ಜಿಲ್ಲಾಧ್ಯಕ್ಷ ಮಹೇಶ್ ತಿಮ್ಮಯ್ಯ, ಪಂಚರಾಜ್ಯಗಳ ಚುನಾವಣೆಯಲ್ಲಿ ಬಿಜೆಪಿ ಅಭೂತಪೂರ್ವ ಜಯಗಳಿಸಿದೆ. ಪಶ್ಚಿಮ ಬಂಗಾಳದಲ್ಲಿ ಬಿಜೆಪಿಯ ಗೆಲುವು ಐತಿಹಾಸಿಕವಾಗಿದೆ. ಮಮತಾ ಬ್ಯಾನರ್ಜಿ ಅವರ ದುರಾಡಳಿತ, ದೇಶ ವಿರೋಧಿ ನೀತಿಗೆ ಜನತೆ ತಕ್ಕಪಾಠ ಕಲಿಸಿದ್ದಾರೆ. ಇದೇ ಹಾದಿಯಲ್ಲಿರುವ ಕಾಂಗ್ರೆಸ್‌ನ್ನು ಸಾರಾಸಗಟಾಗಿ ತಿರಸ್ಕರಿಸುವ ಮೂಲಕ ರಾಷ್ಟ್ರೀಯ ಏಕತೆಗಾಗಿ ಬಿಜೆಪಿಯನ್ನು ಬೆಂಬಲಿಸಿದ್ದಾರೆ ಎಂದರು.

ಮುಂದಿನ ಕರ್ನಾಟಕ ವಿಧಾನ ಸಭಾ ಚುನಾವಣೆಯಲ್ಲಿಯೂ ಬಿಜೆಪಿ ಗೆಲುವು ಸಾಧಿಸಿ ರಾಜ್ಯದಲ್ಲಿ ಅಧಿಕಾರಕ್ಕೆ ಬರಲಿದೆ ಎಂದು ಅಭಿಪ್ರಾಯಿಸಿದರು. ಈ ಸಂದರ್ಭ ಪಕ್ಷದ ಪ್ರಮುಖರಾದ ಮನುಕುಮಾರ್‌ರೈ, ಹೆಚ್.ಕೆ. ಮಾದಪ್ಪ, ದರ್ಶನ್ ಜೋಯಪ್ಪ, ಬಿ.ಎ. ಧರ್ಮಪ್ಪ, ಕಂಠಿ ಕಾರ್ಯಪ್ಪ, ಎಸ್.ಆರ್. ಸೋಮೇಶ್, ಪಿ.ಕೆ. ಚಂದ್ರು, ಸಿ.ಡಿ. ನೆಹರು, ದೇಶ್‌ರಾಜ್, ಮಂಜುಳಾ ಸುಬ್ರಮಣಿ, ವಿಜಯಕುಮಾರ್, ಸುಧೀರ್, ಶಿವಕುಮಾರ್‌ಸೇರಿದಂತೆ ಇತರರು ಇದ್ದರು.


ನಾಲ್ಕು ರಾಜ್ಯಗಳಲ್ಲಿ ಬಿಜೆಪಿಗೆ ಅಭೂತಪೂರ್ವ ಗೆಲುವು ಹಿನ್ನೆಲೆಯಲ್ಲಿ ಸೋಮವಾರಪೇಟೆಯಲ್ಲಿ ವಿಜಯೋತ್ಸವ ನಡೆಯಿತು.

ಆಟೋ ಚಾಲಕಗೆ ಮಾರಣಾಂತಿಕ ಹಲ್ಲೆ: ಆರೋಪಿಗಳು ಪರಾರಿ

ನಾಪೋಕ್ಲು: ಆಟೋ ಚಾಲಕರೊಬ್ಬರ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿ ಆರೋಪಿಗಳು ಪರಾರಿಯಾದ ಘಟನೆ ಸೋಮವಾರ ಸಂಜೆ ಇಲ್ಲಿಯ ಪೊಲೀಸ್ ಠಾಣಾ ವ್ಯಾಪ್ತಿಯ ಬೇತುಗ್ರಾಮದಲ್ಲಿ ನಡೆದಿದೆ. ಹಲ್ಲೆಗೊಳಗಾದ ಆಟೋಚಾಲಕ (ಪತ್ರಿಕಾ ವರದಿಗಾರ) ಝುಕರಿಯ ತೀವ್ರ ರಕ್ತಸ್ರಾವದಿಂದ ಚರಂಡಿಗೆ ಬಿದ್ದಿದ್ದನ್ನು ಗಮನಿಸಿದ ಸ್ಥಳೀಯರು ಹಾಗೂ ಪೊಲೀಸರು ಆತನಿಗೆ ಇಲ್ಲಿಯ ಸಮುದಾಯ ಆರೋಗ್ಯಕೇಂದ್ರದಲ್ಲಿ ಚಿಕಿತ್ಸೆ ನೀಡಿ ಬಳಿಕ ಮಡಿಕೇರಿ ಜಿಲ್ಲಾ ಆಸ್ಪತ್ರೆಯಲ್ಲಿ ಚಿಕಿತ್ಸೆಗೆ ದಾಖಲಿಸಲಾಗಿದೆ.



ಆಸ್ತಿ ವೈಷಮ್ಯದ ಹಿನ್ನೆಲೆಯಲ್ಲಿ ಈ ಹಲ್ಲೆ ನಡೆದಿದೆ ಎನ್ನಲಾಗಿದೆ. ಸ್ಥಳೀಯ ಠಾಣಾಧಿಕಾರಿ ರಾಘವೇಂದ್ರ ಬಿ.ಜಿ ಅವರು ಆಸ್ಪತ್ರೆಗೆ ಭೇಟಿ ನೀಡಿ ಝುಕರಿಯ ಅವರ ಹೇಳಿಕೆಯನ್ನು ಪಡೆದುಕೊಂಡು ಪ್ರಕರಣ ದಾಖಲಿಸಿಕೊಂಡಿದ್ದು ಮುಂದಿನ ಕಾನೂನಿನ ಕ್ರಮ ಕೈಗೊಂಡಿದ್ದಾರೆ .

ಪ್ರತಿಭಟನೆ | ಅಹೋರಾತ್ರಿ ಧರಣಿನಿರತರ ಸಂಖ್ಯೆ 600ಕ್ಕೆ ಏರಿಕೆ | ತಾತ್ಕಾಲಿಕ ಶೌಚಾಲಯ, ಟಾರ್ಪಲ್ ಹೊದಿಕೆಯ ಪೆಂಡಾಲ್

ಕುಂಬೂರು: ನಿವೇಶನ ರಹಿತ ಕಾರ್ಮಿಕರ ಧರಣಿ 5ನೇ ದಿನಕ್ಕೆ

• **ಕನ್ನಡಪ್ರಭವಾರ್ತೆ** ಸೋಮವಾರಪೇಟೆ

ನಿವೇಶನ ರಹಿತ ಬಡವರಿಗೆ ನಿವೇಶನ ನೀಡುವಂತೆ ಒತ್ತಾಯಿಸಿ, ಕರ್ನಾಟಕ ಬಹುಜನ ಕಾರ್ಮಿಕ ಸಂಘಟನೆಯ ನೇತೃತ್ವದಲ್ಲಿ ಕುಂಬೂರು ಗ್ರಾಮದ ಪೈಸಾರಿ ಜಾಗದಲ್ಲಿ ವಸತಿರಹಿತ ಕಾರ್ಮಿಕರು ನಡೆಸುತ್ತಿರುವ ಅಹೋರಾತ್ರಿ ಧರಣಿ 5ನೇ ದಿನಕ್ಕೆ ಕಾಲಿಟ್ಟಿದೆ.

ಧರಣಿಯಲ್ಲಿ ವಸತಿ ರಹಿತರ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದೆ. ಮೊದಲ ದಿನ ಶನಿವಾರ ತಹಸೀಲ್ದಾರ್, ಡಿಎಫ್‌ಒ, ತಾಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿಗಳು ಭೇಟಿ ನೀಡಿ ಧರಣಿ ನಿರತರನ್ನು ಚರ್ಚೆ ಮಾಡಿದರು.

ಪ್ರಾರಂಭದಲ್ಲಿ 400 ಕುಟುಂಬಗಳು ಧರಣಿಯಲ್ಲಿ ಭಾಗವಹಿಸಿದ್ದು. ಮಂಗಳವಾರ ಧರಣಿನಿರತರ ಸಂಖ್ಯೆ 600ಕ್ಕೆ ಏರಿಕೆ. ವಸತಿರಹಿತರ ಧರಣಿಗೆ ಸಂಬಂಧಿಸಿದಂತೆ ಎಲ್ಲ ಸಿದ್ದತೆಗಳನ್ನು ಮಾಡಿಕೊಂಡಿದ್ದಾರೆ. ತಾತ್ಕಾಲಿಕ ಶೌಚಾಲಯ ವ್ಯವಸ್ಥೆ ಮಾಡಿಕೊಂಡಿದ್ದಾರೆ. ಮಳೆಯಿಂದ ರಕ್ಷಣೆ ಪಡೆಯಲು ಟಾರ್ಪಲ್ ಹೊದಿಕೆಯ ಪೆಂಡಾಲ್ ಮಾಡಿಕೊಂಡಿದ್ದಾರೆ. ವಸತಿರಹಿತರು ಮನೆಯಿಂದ ಪಡಿತರ ತಂದುಕೊಂಡು ಅಡುಗೆ ಮಾಡಿಕೊಳ್ಳುಕೊಳ್ಳುತ್ತಿದ್ದಾರೆ. ವೃದ್ದ ಮಹಿಳೆಯರು ಧರಣಿಯಲ್ಲಿ ಪಾಲ್ಗೊಂಡಿದ್ದಾರೆ.

ರಾತ್ರಿ ಮಲಗಿದ್ದಾಗ ಹಾವುಗಳ ಭಯವಿದೆ. ಇನ್ನೊಂದು ಕಾಡಾನೆಗಳ ಆತಂಕವೂ ಇದೆ ಎಂದು ಧರಣಿ ನಿರತ ಗೀತಾಮಣಿ ಹೇಳಿದರು. ಕಾರ್ಮಿಕ ಸಂಘಟನೆ ಅಧ್ಯಕ್ಷ ಕೆ.ಮೊಣ್ಣಪ್ಪ ಸುದ್ದಿಗಾರರೊಂದಿಗೆ ಮಾತನಾಡಿ, ಸೋಮವಾರಪೇಟೆ ಹಾಗೂ ಕುಶಾಲನಗರ ತಾಲ್ಲೂಕಿನಲ್ಲಿ 30 ಸಾವಿರದಷ್ಟು ವಸತಿರಹಿತರಿದ್ದಾರೆ. ಅವರಿಗೆ ಗುಡಿಸಲು ಕಟ್ಟಿಕೊಳ್ಳಲು ಕೊಡುವಷ್ಟು ಪೈಸಾರಿ ಜಾಗವಿದೆ. ಆದರೆ ಸರ್ಕಾರಕ್ಕೆ ಬಡವರಿಗೆ ನಿವೇಶನ ನೀಡುವ ಮನಸ್ಸಿಲ್ಲ. ಪೈಸಾರಿ ಜಾಗವನ್ನು ಉಳ್ಳವರು ಒತ್ತುವರಿ ಮಾಡಿಕೊಂಡಿದ್ದಾರೆ. ಈಗಲೂ ಒತ್ತುವರಿ ಮಾಡಿಕೊಳ್ಳುತ್ತಿದ್ದಾರೆ. ಅಂತಹವರಿಗೆ ಹಕ್ಕುಪತ್ರಗಳನ್ನೂ ನೀಡುವ ಶಪ್ರಯತ್ನ ನಡೆದಿದೆ ಎಂದು ದೂರಿದರು. ತಾಲೂಕು ಕಾರ್ಯ ನಿರ್ವಹಣಾಧಿಕಾರಿಗಳ ಮಾಹಿತಿ ಪ್ರಕಾರ 2014ರವರೆಗೆ 6500 ಮಂದಿ ವಸತಿ ರಹಿತರು ಅರ್ಜಿ ಸಲ್ಲಿಸಿದ್ದಾರೆ. ಕಳೆದ 12 ವರ್ಷಗಳಿಂದ ಬಡವರು, ಕಾರ್ಮಿಕರಿಂದ ಅರ್ಜಿಯನ್ನು ಪಡೆದುಕೊಳ್ಳದೆ ಅನ್ಯಾಯ ವೆಸಗಲಾಗಿದೆ. ತಾಲೂಕಿನಲ್ಲಿರುವವಸತಿರಹಿತ ಬಡವರಿಗೆ ಉಚಿತ ನಿವೇಶನ ನೀಡುವ ತನಕ ಆಹೋರಾತ್ರಿ ಧರಣಿ ನಡೆಯಲಿದೆ ಎಂದು ಹೇಳಿದರು.


ಕುಂಬೂರು ಗ್ರಾಮದ ಪೈಸಾರಿ ಜಾಗದಲ್ಲಿ ವಸತಿರಹಿತ ಕಾರ್ಮಿಕರು ನಡೆಸುತ್ತಿರುವ ಅಹೋರಾತ್ರಿ ಧರಣಿ 5ನೇ ದಿನಕ್ಕೆ ಕಾಲಿಟ್ಟಿದೆ.

ಪೊನ್ನಂಪೇಟೆ: ಬಿಜೆಪಿ ವಿಜಯೋತ್ಸವ



ಪೊನ್ನಂಪೇಟೆಯಲ್ಲಿ ಬಿಜೆಪಿ ವಿಜಯೋತ್ಸವ.

ಪೊನ್ನಂಪೇಟೆ: ಪಶ್ಚಿಮ ಬಂಗಾಳ, ಅಸ್ಸಾಂ ಮತ್ತು ಪುದುಚೇರಿಯಲ್ಲಿ ಬಿಜೆಪಿ ಭರ್ಜರಿ ಗೆಲುವು ಸಾಧಿಸಿದ ಹಿನ್ನೆಲೆಯಲ್ಲಿ ಪೊನ್ನಂಪೇಟೆಯಲ್ಲಿ ಬಿಜೆಪಿ ಪ್ರಮುಖರು ಹಾಗೂ ಕಾರ್ಯಕರ್ತರು ವಿಜಯೋತ್ಸವ ಆಚರಿಸಿದರು.

ಪಟ್ಟಣದಲ್ಲಿ ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಿಸಿದ ಕಾರ್ಯಕರ್ತರು ಪ್ರಧಾನಮಂತ್ರಿ ನರೇಂದ್ರ ಮೋದಿ ಹಾಗೂ ಬಿಜೆಪಿ ಪರ ಘೋಷಣೆಗಳನ್ನು ಕೂಗಿದರು. ಮುಂದಿನ ದಿನಗಳಲ್ಲಿ ದೇಶದ ಎಲ್ಲಾ ರಾಜ್ಯಗಳಲ್ಲಿ ಬಿಜೆಪಿ ಅಧಿಕಾರಕ್ಕೆ ಬರಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ನೆಲ್ಲಿರ ಚಲನ್ ಕುಮಾರ್, ತಾಲೂಕು ಕಾರ್ಯದರ್ಶಿ ಕೋಟೇರ ಕಿಶನ್ ಉತ್ತಪ್ಪ, ವಿರಾಜಪೇಟೆ ಮಂಡಲ ವಕ್ತಾರ ಚೆಪ್ಪುಡಿರ ರಾಕೇಶ್ ದೇವಯ್ಯ, ಪ್ರಧಾನ ಕಾರ್ಯದರ್ಶಿ ಆಲೇಮಾಡ ಸುದೀಪ್, ಪ್ರಮುಖರಾದ ಚಿರಿಯಪಂಡ ರಾಜಾ ನಂಜಪ್ಪ, ಚೆಂಡಮಾಡ ರಕ್ಷಿತ್, ಮೂಕಳೇರ ಲಕ್ಷ್ಮಣ್ ಮೂಕಳೇರ ರಮೇಶ್, ಅಡ್ಡಂಡ ಪ್ರಕಾಶ್, ಎಸ್‌ಸಿ ಮೋರ್ಚಾದ ರಮೇಶ್, ಮಧು, ಕೊಟ್ಟಂಗಡ ಸಜನ್ ಪೂವಣ್ಣ, ರೇಖಾ ಶ್ರೀಧರ್, ಗಾಂಡಂಗಡ ಕೌಶಿಕ್ ದೇವಯ್ಯ, ಕೋಳೇರ ರಾಜ ಹಾಗೂ ಕಾರ್ಯಕರ್ತರು ಪಾಲ್ಗೊಂಡಿದ್ದರು.

ಪ್ರಾಮಾಣಿಕ ರೀತಿಯಲ್ಲಿ ತಮ್ಮ ಶ್ರೀಮಂತ ಮತ್ತು ವಿಶಿಷ್ಟವಾದ ಮೂಲ ಸಂಸ್ಕೃತಿ ಸಂರಕ್ಷಿಸಿಕೊಂಡು ಹೋಗುವ ಮೂಲಕ ಕೊಡವ ಸಮುದಾಯವರು ಮಾದರಿಯಾಗಿದ್ದಾರೆ. ಈ ಮೂಲಕ ಪ್ರಪಂಚದಲ್ಲಿಯೇ ಕೊಡವರು ತನ್ನತನವನ್ನು ಮೆರೆಯುತ್ತಿದ್ದಾರೆ.

• **ಬಸವರಾಜ ಬೊಮ್ಮಾಯಿ** ಹಾವೇರಿ ಸಂಸದ, ಮಾಜಿ ಮುಖ್ಯಮಂತ್ರಿ

ಸುದ್ದಿ ಸಿಂಚನ

ಓಟ್ ಚೋರಿ ತನಿಖೆ: ಭೋಸರಾಜು ಆಗ್ರಹ



ಮಡಿಕೇರಿ: ಶೃಂಗೇರಿ ಕ್ಷೇತ್ರದಲ್ಲೂ ಓಟ್ ಚೋರಿ ಆಗಿದ್ದು, ಇದರ ಬಗ್ಗೆ ಸರಿಯಾದ ತನಿಖೆ ನಡೆಯಬೇಕು ಎಂದು ಕೊಡಗು ಜಿಲ್ಲಾ ಉಸ್ತುವಾರಿ ಸಚಿವ ಭೋಸರಾಜು ಆಗ್ರಹಿಸಿದ್ದಾರೆ.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚುನಾವಣಾ ಸಿಬ್ಬಂದಿಯಿಂದಲೇ ಓಟ್ ಚೋರಿ ಆಗಿದೆ ಎನ್ನುವ ಸಿಎಂ ಹೇಳಿಕೆಗೆ ಪ್ರತಿಕ್ರಿಯಿಸಿ, ನಮಗೆ ಇರುವ ಅನುಮಾನವನ್ನು ಸಿಎಂ ಅವರೇ ಹೇಳಿದ್ದಾರೆ ಎಂದರು. ಚುನಾವಣೆ ನಡೆದಾಗಲೂ ಚುನಾವಣಾ ಆಯೋಗ ನೇಮಿಸಿದ್ದ ಅಧಿಕಾರಿಗಳೇ ಕೌಂಟ್ ಮಾಡಿದ್ದರು. ಈಗಲೂ ಅದೇ ಅಧಿಕಾರಿಗಳು ಕೌಂಟ್ ಮಾಡಿದ್ದಾರೆ. ಆವಾಗಲೂ ಅವರದೇ ಸರ್ಕಾರವಿತ್ತು, ಈಗಲೂ ಅವರದೇ ಸರ್ಕಾರವಿದೆ. ಅಂದು ರಾಜೇಗೌಡ ಅವರಿಗೆ 250 ಕ್ಕೂ ಹೆಚ್ಚು ಮತಗಳು ಬಂದಿವೆ ಎಂದು ಹೇಗೆ ಹೇಳಿದ್ದರು. ಇಂದು ಅದ್ಹೇಗೆ 56 ಮತಗಳು ಜೀವರಾಜ್ ಅವರಿಗೆ ಹೆಚ್ಚು ಬರಲು ಸಾಧ್ಯ. ಸಹಜವಾಗಿ ಓಟ್ ಟ್ಯಾಂಪರ್‌ಆಗಿರಬೇಕು. ಒಂದೆರಡು ಓಟಗಳು ವ್ಯತ್ಯಾಸ ಆಗುವುದರಲ್ಲಿ ಸಹಜ ಎನ್ನಬಹುದು. ಆದರೆ 170 ಕ್ಕೂ ಹೆಚ್ಚು ಮತಗಳು ಹೇಗೆ ವ್ಯತ್ಯಾಸ ಆಗುತ್ತವೆ. ಇದನ್ನು ನೋಡಿದರೆ ಓಟ್ ಟ್ಯಾಂಪರ್ ಆಗಿದೆ ಎಂತಲೇ ಅರ್ಥ ಇದರ ಕುರಿತು ಸರಿಯಾದ ತನಿಖೆ ನಡೆಯಬೇಕು ಎಂದರು. ಇದರ ಜವಾಬ್ದಾರಿಯನ್ನು ಚುನಾವಣಾ ಅಧಿಕಾರಿಯೇ ಹೊರಬೇಕು ಎಂದರು.

16, 17ರಂದು ಕೊಡಗು ಜಿಲ್ಲಾ ಕುಲಾಲರ ಸಂಘದ ಕ್ರೀಡೋತ್ಸವ

ಮಡಿಕೇರಿ: ಕೊಡಗು ಜಿಲ್ಲಾ ಕುಲಾಲ(ಕುಂಬಾರ)ರ ಸಂಘದ ನೇತೃತ್ವದಲ್ಲಿ ಕ್ರೀಡೋತ್ಸವ ಪ್ರಯುಕ್ತ ಸಮ್ಮಿಲನ- 2026 ಮೇ 16, 17ರಂದು ಮಡಿಕೇರಿ ಮ್ಯಾನ್ಸ್ ಕಾಂಪೌಂಡ್ ಮೈದಾನದಲ್ಲಿ ನಡೆಯಲಿದೆ ಎಂದು ಕೊಡಗು ಜಿಲ್ಲಾ ಕುಲಾಲ(ಕುಂಬಾರ)ರ ಸಂಘದ ಅಧ್ಯಕ್ಷ ಕೆ.ಕೆ.ದಾಮೋದರ್‌ತಿಳಿಸಿದರು.

ನಗರದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲೆಯ ಮೂಲೆಮೂಲೆಗಳಿಂದ 5000ಕ್ಕೂ ಹೆಚ್ಚು ಕುಲಬಾಂಧವರು ಭಾಗವಹಿಸುವ ನಿರೀಕ್ಷೆ ಇದೆ ಎಂದ ಅವರು, ಇದು ಕೇವಲ ಒಂದು ಸಮ್ಮೇಳನವಲ್ಲ, ಬದಲಿಗೆ ನಮ್ಮ ಸಮಾಜದ ಸ್ವಾಭಿಮಾನದ ಸಂಕೇತ. ನಮ್ಮ ಸಂಘಟನೆಯ ಈ ಹೆಜ್ಜೆಯು ಮುಂದಿನ ಪೀಳಿಗೆಗೆ ಮಾರ್ಗದರ್ಶಕವಾಗಲಿದೆ ಎಂದು ಮನವಿ ಮಾಡಿದರು. ಮೇ 17ರಂದು ಸಂಜೆ ನಡೆಯುವ ಸಮಾರೋಪ ಸಮಾರಂಭದ ಅಧ್ಯಕ್ಷತೆಯನ್ನು ಸಂಘದ ಪ್ರಭಾರ ಅಧ್ಯಕ್ಷ ಲಯನ್ ಕೆ. ಕೆ.ದಾಮೋದರ್‌ವಹಿಸಲಿದ್ದಾರೆ. ಸಂಸದ ಯದುವೀರ್‌ಕೃಷ್ಣದತ್ತ ಚಾಮರಾಜ ಒಡೆಯರ್, ಶಾಸಕರಾದ ಡಾ.ಮಂತರ್‌ಗೌಡ, ಎ.ಎಸ್ .ಪೊನ್ನಣ್ಣ, ಚಿತ್ರನಟ ಭುವನ್ ಪೊನ್ನಣ್ಣ, ನಟಿ ಹರ್ಷಿಕಾ ಪೂಣಚ್ಚ ಆಗಮಿಸಲಿದ್ದಾರೆ. ರಾಜ್ಯ ಕುಂಬಾರ ನಿಗಮದ ಅಧ್ಯಕ್ಷ ಡಾ.ಶ್ರೀನಿವಾಸ್ ವೇಲು, ಗೌರವಾನ್ವಿತ ನ್ಯಾಯಾಧೀಶರಾದ ರೇಖಾಕಾಂಬ, ಮಂಗಳೂರು, ಕಾಸರಗೋಡು, ಮೈಸೂರು, ಬೆಂಗಳೂರು ಜಿಲ್ಲೆಗಳ ಕುಲಾಲ ಸಂಘಗಳ ಅಧ್ಯಕ್ಷರು, ಸಂಘದ ಸ್ಥಾಪಕ ಅಧ್ಯಕ್ಷ ಮುತ್ತಮ್ಮ ಕೋಟೆ ಹಾಗೂ ಮಾಜಿ ಅಧ್ಯಕ್ಷ ಕುಶಾಲಪ್ಪ ಮೂಲ್ಯ ಉಪಸ್ಥಿತರಿರಲಿದ್ದಾರೆ. ಕಾರ್ಯಕ್ರಮದಲ್ಲಿ ಮೊಟ್ಟಮೊದಲ ಕುಂಬಾರ ನಿಗಮದ ಅಧ್ಯಕ್ಷ ಡಾ.ಶ್ರೀನಿವಾಸ್ ವೇಲು ಹಾಗೂ ಸಮಾಜದ ಏಳಿಗೆಗಾಗಿ ದುಡಿದ ಇತರರನ್ನು ಸನ್ಮಾನಿಸಲಾಗುವುದು ಎಂದು ಮಾಹಿತಿ ನೀಡಿದರು.

ಕ್ರೀಡಾಧ್ಯಕ್ಷ ಶಾಂತಕುಮಾರ್‌ಮಾತನಾಡಿ, ಮೇ 16ರಂದು ಬೆಳಗ್ಗೆ 7ಗಂಟೆಗೆ ಓಂಕಾರೇಶ್ವರ ದೇಗುಲದಲ್ಲಿ ಪೂಜೆ ಸಲ್ಲಿಸಿ ಕ್ರೀಡಾ ಜ್ಯೋತಿ ತಂದು ಕ್ರೀಡೋತ್ಸವಕ್ಕೆ ಚಾಲನೆ ನೀಡಲಾಗುವುದು. ಮೇ. 17ರಂದು ಹಗ್ಗಜಗ್ಗಾಟ, ಸಂಗೀತ ಕುರ್ಚಿ ಸೇರಿ ವಿವಿಧ ಸ್ಪರ್ಧೆಗಳು ನಡೆಯಲಿವೆ ಎಂದರು.

ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಕುಲಾಲ(ಕುಂಬಾರ)ರ ಸಂಘದ ಉಪಾಧ್ಯಕ್ಷ ಸುರೇಶ್, ಖಜಾಂಚಿ ಕೆ.ಎಸ್.ಗಿರೀಶ್, ನಿರ್ದೇಶಕರಾದ ರಾಮಚಂದ್ರ, ಕೆ.ವೈ.ಅಶ್ವತ್ ಇದ್ದರು.

ಸಂಸ್ಕೃತಿ ರಕ್ಷಣೆಗೆ ಕೊಡವರು ಮಾದರಿ: ಬೊಮ್ಮಾಯಿ

ಮಾದಾಪುರದಲ್ಲಿ ಕೊಡವ ಸಮಾಜ ಭವನ ಲೋಕಾರ್ಪಣೆ | 25 ಲಕ್ಷ ರು. ಅನುದಾನ ಘೋಷಿಸಿದ ಯದುವೀರ್

■ ಪ್ರಾಮಾಣಿಕ ರೀತಿಯಲ್ಲಿ ತಮ್ಮ ಶ್ರೀಮಂತ ಮತ್ತು ವಿಶಿಷ್ಟವಾದ ಮೂಲ ಸಂಸ್ಕೃತಿ ಸಂರಕ್ಷಿಸಿಕೊಂಡು ಹೋಗುವ ಮೂಲಕ ಕೊಡವ ಸಮುದಾಯವರು ಮಾದರಿಯಾಗಿದ್ದಾರೆ. ಈ ಮೂಲಕ ಪ್ರಪಂಚದಲ್ಲಿಯೇ ಕೊಡವರು ತನ್ನತನವನ್ನು ಮೆರೆಯುತ್ತಿದ್ದಾರೆ ಎಂದು ಹಾವೇರಿ ಸಂಸದ, ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಶ್ಲಾಘಿಸಿದ್ದಾರೆ.

• **ಕನ್ನಡಪ್ರಭ ವಾರ್ತೆ** ಸುಂಟಿಕೊಪ್ಪ

ಪ್ರಾಮಾಣಿಕ ರೀತಿಯಲ್ಲಿ ತಮ್ಮ ಶ್ರೀಮಂತ ಮತ್ತು ವಿಶಿಷ್ಟವಾದ ಮೂಲ ಸಂಸ್ಕೃತಿ ಸಂರಕ್ಷಿಸಿಕೊಂಡು ಹೋಗುವ ಮೂಲಕ ಕೊಡವ ಸಮುದಾಯವರು ಮಾದರಿಯಾಗಿದ್ದಾರೆ. ಈ ಮೂಲಕ ಪ್ರಪಂಚದಲ್ಲಿಯೇ ಕೊಡವರು ತನ್ನತನವನ್ನು ಮೆರೆಯುತ್ತಿದ್ದಾರೆ ಎಂದು ಹಾವೇರಿ ಸಂಸದ, ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಶ್ಲಾಘಿಸಿದ್ದಾರೆ.

ಮಾದಾಪುರದಲ್ಲಿ ಮಂಗಳವಾರ ಕೊಡವ ಸಮಾಜದ ನೂತನ ಭವನ ಲೋಕಾರ್ಪಣೆ ಮಾಡಿ ಅವರು ಮಾತನಾಡಿದರು.

ಎಲ್ಲರೂ ಆಧುನಿಕತೆಯತ್ತ ನಾಗಾಲೋಟದಲ್ಲಿ ಸಾಗುತ್ತಿರುವಾಗ ಕೊಡವರು ಮಾತ್ರ ತಮ್ಮ ಹಳೇ ಸಂಸ್ಕೃತಿಯಬುನಾದಿಯೊಂದಿಗೆಆಧುನೀಕತೆಯನ್ನೂ ಅಳವಡಿಸಿಕೊಂಡು ಪ್ರಬಲ ಮತ್ತು ಶ್ರೀಮಂತ ಸಂಸ್ಕೃತಿ ಹೊಂದಿದ ಜನಾಂಗವಾಗಿದ್ದಾರೆ ಎಂದು ಶ್ಲಾಘಿಸಿದರು.

ತೀವ್ರ ರೀತಿಯಲ್ಲಿ ಬೆಳೆಯುತ್ತಾ ಸಾಗಿರುವ ನಮ್ಮ ನಾಗರಿಕತೆಯಲ್ಲಿ ಯಾವಾಗ ನಾವು ಸಂಸ್ಕೃತಿಯನ್ನೂ ಒಳಗೊಳ್ಳುತ್ತೇವೆಯೋ ಅಂಥ ಸಂದರ್ಭ ನಮ್ಮ ನಾಗರಿಕತೆ ಎಂದಿಗೂ ನಶಿಸಲು ಸಾಧ್ಯವಿಲ್ಲ ಎಂದು ಬೊಮ್ಮಾಯಿ ಹೇಳಿದರು.

ಕೊಡಗಿನ ಅಭಿವೃದ್ಧಿಗಾಗಿ ಮುಖ್ಯಮಂತ್ರಿಯಾಗಿದ್ದ ಸಂದರ್ಭ ಸಾಕಷ್ಟು



ಮಾದಾಪುರದಲ್ಲಿ ಕೊಡವ ಸಮಾಜ ಭವನ ಲೋಕಾರ್ಪಣೆ ಕಾರ್ಯಕ್ರಮ ನಡೆಯಿತು.

ಅನುದಾನ ನೀಡಿದ್ದನ್ನು ಸ್ಮರಿಸಿಕೊಂಡ ಬಸವರಾಜ ಬೊಮ್ಮಾಯಿ, ಅನುದಾನ ನೀಡಿದ್ದು ಖಂಡಿತಾ ಸಾಧನೆಯಲ್ಲ. ಕೊಡಗಿನ ಜನರು ಸರ್ಕಾರಕ್ಕೆ ನೀಡಿದ್ದ ಆರ್ಥಿಕ ಸಂಪನ್ಮೂಲವನ್ನು ಮತ್ತೆ ಕೊಡಗಿನ ಜನತೆಗೇ ನೀಡುವ ಮೂಲಕ ಪುಣ್ಯ ಸಂಪಾದನೆಯ ಅವಕಾಶ ಮಾತ್ರ ತನ್ನದಾಯಿತು ಎಂದರು.

ಸಭಾ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಕ್ಷೇತ್ರದ ಸಂಸದ ಯದುವೀರ್‌ಒಡೆಯರ್, ಮಾದಾಪುರ ಕೊಡವ ಸಮಾಜದ ಭವನಕ್ಕೆ ಸಂಸದರ ಅನುದಾನದಲ್ಲಿ 25 ಲಕ್ಷ ರು. ನೀಡುವುದಾಗಿ ಘೋಷಿಸಿ, ಇದು ಕೊಡವರಿಗೆ ಸಲ್ಲಬೇಕಾದ ಗೌರವದ ಅನುದಾನ ಎಂದರಲ್ಲದೇ, ಕೊಡವ ಸಂಸ್ಕೃತಿಸಂರಕ್ಷಣೆಗೆಈ ಭವನಸೂಕ್ತ ವೇದಿಕೆಯಾಗಲಿ ಎಂದು ಹಾರೈಸಿದರು.

ವಿಧಾನಪರಿಷತ್ ಶಾಸಕ ಮಂಡೇಪಂಡ ಸುಜಾ ಕುಶಾಲಪ್ಪ ಮಾತನಾಡಿ, ಕೊಡವರ ಸಂಸ್ಕೃತಿಯ ಹಿರಿಮೆಯ ಸಂರಕ್ಷಣೆಗಾಗಿ ಕೊಡವ ಸಮಾಜಗಳು ಬಹಳ ಮುಖ್ಯ ಪಾತ್ರವನ್ನು ವಹಿಸುತ್ತಿವೆ ಎಂದರಲ್ಲದೆ, ಮಾದಾಪುರ ಕೊಡವ ಸಮಾಜದ ಕಟ್ಟಡದ ಉಳಿದ ಕಾಮಗಾರಿಗಳಿಗೆ ಶಾಸಕರ ಅನುದಾನದಿಂದ 10 ಲಕ್ಷ ರುಪಾಯಿ ನೀಡುವುದಾಗಿ ಘೋಷಿಸಿದರು.

ಮಾಜಿ ಸಚಿವ ಮಂಡೇಪಂಡ ಅಪ್ಪಚ್ಚು ರಂಜನ್ ಮಾತನಾಡಿ, ಮುಖ್ಯಮಂತ್ರಿಯಾಗಿದ್ದ ಸಂದರ್ಭ ಕೊಡವರ ಮೇಲಿನ ವಿಶೇಷ ಅಭಿಮಾನದಿಂದ ಬಸವರಾಜ ಬೊಮ್ಮಾಯಿವರು ಮಾದಾಪುರ ಕೊಡವ ಸಮಾಜದ ಭವನ ನಿರ್ಮಾಣಕ್ಕಾಗಿ 1 ಕೋಟಿ ರು. ಅನುದಾನವನ್ನು ಸಮಸ್ಯೆಯಿಲ್ಲದಂತೆ ಬಿಡುಗಡೆ ಮಾಡಿದ್ದರು. ಅಂತೆಯೇ ಕೊಡವ ಸಮುದಾಯದ ಅಭಿವೃದ್ಧಿಗಾಗಿ ಬೊಮ್ಮಾಯಿಯವರು ನೀಡಿದ್ದ 10 ಕೋಟಿ ರು. ಅನುದಾನದಲ್ಲಿ 5 ಕೋಟಿ ರು.ಗಳನ್ನು ಕೊಡವ ಸಮಾಜ ಒಕ್ಕೂಟಕ್ಕೆ ನೀಡಲಾಗಿದ್ದು ಉಳಿದ 6 ಕೋಟಿ ರು. ಅನುದಾನವನ್ನು ಎಲ್ಲಾ ಕೊಡವ ಸಮಾಜಗಳಿಗೆ ತಲಾ 10 ಲಕ್ಷ ರು.ಗಳಂತೆ ನೀಡಲಾಗಿತ್ತು ಎಂದು ಮಾಹಿತಿ ನೀಡಿದರು.

ವಿಧಾನಪರಿಷತ್ ಮಾಜಿ ಶಾಸಕಿ ಶಾಂತೆಯಂಡ ವೀಣಾ ಅಚ್ಚಯ್ಯ, ಕೊಡವ ಸಾಹಿತ್ಯ ಅಕಾಡೆಮಿ ಅಧ್ಯಕ್ಷ ಅಜ್ಜಿನಿಕಂಡ ಮಹೇಶ್ ನಾಚಯ್ಯ, ಎಸ್ ಎಲ್ ಎನ್ ಸಂಸ್ಥೆಯ ಉದ್ಯಮಿ ಸಾತಪ್ಪನ್ ಮಾದಾಪುರ ಕೊಡವ ಸಮಾಜದ ಅಧ್ಯಕ್ಷ ಮಂಡೇಪಂಡ ಮನುಮೇದಪ್ಪ ಮಾತನಾಡಿದರು.

ವಿಧಾನಪರಿಷತ್ ಮಾಜಿ ಶಾಸಕ ಮಂಡೇಪಂಡ ಸುನೀಲ್ ಸುಬ್ರಹ್ಮಣಿ, ಉದ್ಯಮಿಗಳಾದ ವಿಶ್ವನಾಥನ್, ನಾಪಂಡ ಮುತ್ತಪ್ಪ, ತೆರಿಗೆ ಇಲಾಖೆಯ ಆಯುಕ್ತ ಜಯರಾಮ್, ಪದ್ಮಶ್ರೀ ಮಚ್ಚಂಡ ರೋಹನ್ ಬೋಪಣ್ಣ ಅವರ ತಂದೆ ಮಚ್ಚಂಡ ಬೋಪಣ್ಣ, ಸಮಾಜದ ಉಪಾಧ್ಯಕ್ಷ ಪಾಸುರ ಎನ್. ಉತ್ತಪ್ಪ, ಆಡಳಿತ ಮಂಡಳಿಯ ನಿರ್ದೇಶಕರು ಹಾಜರಿದ್ದರು.

ಅಜ್ಜಿಕುಟ್ಟೀರ ಗಿರೀಶ್ ಮತ್ತು ಸುನೀತಾ ನಿರೂಪಿಸಿದ ಕಾರ್ಯಕ್ರಮದಲ್ಲಿ ಮಾದಾಪುರ ಕೊಡವ ಸಮಾಜದ ಕಾರ್ಯದರ್ಶಿ ನಾಗಂಡ ಸಿ. ಕಾಳಪ್ಪ ವಂದಿಸಿದರು. ಕೊಡವ ಸಮಾಜ ಭವನ ನಿರ್ಮಾಣಕ್ಕೆ ಸಹಕರಿಸಿದ ದಾನಿಗಳು, ತಾಂತ್ರಿಕ ಸಿಬ್ಬಂದಿಗಳನ್ನು ಈ ಸಂದರ್ಭ ಸನ್ಮಾನಿಸಿ ಗೌರವಿಸಲಾಯಿತು.

ವಿವಿಧ ತಂಡಗಳಿಂದ ಕೊಡವ ಸಾಂಪ್ರದಾಯಿಕ ನೃತ್ಯಗಳ ಪ್ರದರ್ಶನವೂ ಕಾರ್ಯಕ್ರಮದ ಆಕರ್ಷಣೆಯಾಗಿತ್ತು.

ಫೈರಿಂಗ್ ರೇಂಜ್ ಉಪಯುಕ್ತ: ಪ್ರೊ.ಅಶೋಕ್

ಮಡಿಕೇರಿ: ಶಾರ್ಟ್ ರೇಂಜ್ ರೈಫಲ್ ಫೈರಿಂಗ್ ರೇಂಜ್ ಉದ್ಘಾಟನೆ



5.50 ಲಕ್ಷ ರು. ವೆಚ್ಚದಲ್ಲಿ ನಿರ್ಮಿಸಲಾಗಿರುವ ಶಾರ್ಟ್ ರೇಂಜ್ ರೈಫಲ್ ಫೈರಿಂಗ್ ರೇಂಜ್ ಉದ್ಘಾಟನೆ ನಡೆಯಿತು.

• **ಕನ್ನಡಪ್ರಭ ವಾರ್ತೆ** ಮಡಿಕೇರಿ

ಮಡಿಕೇರಿ ಫೀಲ್ಡ್ ಮಾರ್ಷಲ್ ಕಾರ್ಯಪ್ಪ ಕಾಲೇಜಿನ ಹಳೇ ವಿದ್ಯಾರ್ಥಿ ಸಂಘದ ಮೂಲಕ 5.50 ಲಕ್ಷ ರೂ. ವೆಚ್ಚದಲ್ಲಿ ನಿರ್ಮಿಸಲಾಗಿರುವ ಶಾರ್ಟ್ ರೇಂಜ್ ರೈಫಲ್ ಫೈರಿಂಗ್ ರೇಂಜ್ ಅನ್ನು 19ನೇ ಕರ್ನಾಟಕ ಬೆಟಾಲಿಯನ್ ಎನ್ ಸಿಸಿ ಕಮಾಂಡಿಂಗ್ ಆಫೀಸರ್‌ಕರ್ನಲ್ ರೆಜಿತ್ ಮುಕುಂದನ್ ಮತ್ತು ಕೊಡಗು ವಿ.ವಿ ಉಪ ಕುಲಪತಿ ಪ್ರೊ.ಅಶೋಕ್ ಸಂಗಪ್ಪ ಅವರು ಉದ್ಘಾಟಿಸಿದರು.

ಬಳಿಕ ಮಾತನಾಡಿದ ಕರ್ನಲ್ ರೆಜಿತ್ ಮುಕುಂದನ್ ಮಡಿಕೇರಿ ಮುತ್ತ ಮುತ್ತಲಿನ ಪ್ರದೇಶದಲ್ಲಿ ಎನ್‌ಸಿಸಿ ಕೆಡೆಟ್‌ಗಳಿಗೆ ಫೈರಿಂಗ್ ರೇಂಜ್ ಇಲ್ಲದಾಗಿತ್ತು. 19ನೇ ಕರ್ನಾಟಕ ಎನ್ ಸಿಸಿ ಬೆಟಾಲಿಯನ್‌ಗೆ ಈ ರೈಫಲ್ ಫೈರಿಂಗ್ ರೇಂಜ್ ಅಮೂಲ್ಯವಾಗಿದ್ದು, ಕೆಡೆಟ್‌ಗಳು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಕರೆ ನೀಡಿದರು.

ಫೈರಿಂಗ್ ರೇಂಜ್‌ನ ಅಗತ್ಯತೆಯನ್ನು ಮನಗಂಡು ಫೀಲ್ಡ್ ಮಾರ್ಷಲ್ ಕಾರ್ಯಪ್ಪ ಕಾಲೇಜಿನ ಹಳೇ ವಿದ್ಯಾರ್ಥಿ ಸಂಘ ಕಾಲೇಜು ಮೈದಾನದ ಪಕ್ಕದಲ್ಲೇ ಎನ್‌ಸಿಸಿಗೆ ಕೊಡುಗೆಯಾಗಿ ನೀಡಿರುವುದಕ್ಕೆ ಕರ್ನಲ್ ರೆಜಿತ್ ಮುಕುಂದನ್ ಶ್ಲಾಘನೆ ವ್ಯಕ್ತಪಡಿಸಿದರು.

ಸಭಾ ಕಾರ್ಯಕ್ರಮವನ್ನು ಗಿಡಕ್ಕೆ ನೀರೆರೆಯುವ ಮೂಲಕ ಉದ್ಘಾಟಿಸಿದ ಕೊಡಗು ವಿ.ವಿ ಉಪ ಕುಲಪತಿ ಪ್ರೊ.ಅಶೋಕ್ ಸಂಗಪ್ಪ ಆಲೂರು, ಫೀಲ್ಡ್ ಮಾರ್ಷಲ್ ಕಾರ್ಯಪ್ಪ ಕಾಲೇಜಿನ ಹಳೇ ವಿದ್ಯಾರ್ಥಿ ಸಂಘ ಕಾಲೇಜಿಗೆ ಹತ್ತಾರು ಕೊಡುಗೆಗಳನ್ನು ನೀಡಿದೆ. ಇದೇ ರೀತಿಯ ಸಹಕಾರ ಮುಂದೆಯೂ ಇರಲಿ ಎಂದು ಆಶಿಸಿದರು.

ಬಂದೂಕಿನಿಂದ ಹಾರಿದ ಗುಂಡು ಯಾವ ರೀತಿ ತನ್ನ ಗುರಿಯನ್ನು ತಲುಪುತ್ತದೆಯೋ ಅದೇ ರೀತಿಯಲ್ಲಿ ಎನ್‌ಸಿಸಿ ವಿದ್ಯಾರ್ಥಿಗಳು ತಮ್ಮ ಬದುಕಿನ ಗುರಿಯನ್ನೂ ಹೊಂದಬೇಕು ಎಂದು ಅವರು ಸಲಹೆ ನೀಡಿದರು. ಎನ್‌ಸಿಸಿ ಕೆಡೆಟ್ ಗಳಾಗಿ ಶಿಸ್ತು ಮತ್ತು ದೇಶ ಭಕ್ತಿಯನ್ನೂ ಮೈಗೂಡಿಸಿಕೊಳ್ಳಲು ಸಾಧ್ಯವಿದೆ. ಹೀಗಾಗಿ ಎಲ್ಲ ವಿದ್ಯಾರ್ಥಿಗಳು ಎನ್‌ಸಿಸಿ ಸೇರ್ಪಡೆಯಾಗಬೇಕು. ದೇಶದ ರಕ್ಷಣೆಗೆ ಅಗತ್ಯವಾದಾಗ ದೇಶ ಸೇವೆಗೂ ಮುಂದಾಗಬೇಕು ಎಂದು ಪ್ರೊ.ಅಶೋಕ್ ಸಂಗಪ್ಪ ಕರೆ ನೀಡಿದರು.

ನಿವೃತ್ತ ಪೊಲೀಸ್ ವರಿಷ್ಠಾಧಿಕಾರಿ ಮುಕ್ಕಾಟಿರ ಎ.ಅಪ್ಪಯ್ಯ, ವಿದ್ಯಾರ್ಥಿ ಜೀವನದಲ್ಲಿ ತಾವು ಎನ್‌ಸಿಸಿ ಮೂಲಕ ಪಡೆದ ತರಬೇತಿ, ವಿವಿಧ ಕ್ಯಾಂಪ್‌ಗಳಲ್ಲಿ ಪಡೆದ ಅನುಭವಗಳನ್ನು ವಿದ್ಯಾರ್ಥಿಗಳಿಗೆ ತಿಳಿಸಿದರು.

ಎನ್‌ಸಿಸಿ 'ಸಿ' ಸರ್ಟಿಫಿಕೇಟ್ ಮೂಲಕ ತಾವು ಪೊಲೀಸ್ ಇಲಾಖೆಗೆ ಭರ್ತಿಯಾಗಿ ಕೊಡಗು ಜಿಲ್ಲೆ ಸಹಿತ ರಾಜ್ಯದ ವಿವಿಧ ಭಾಗಗಳಲ್ಲಿ ಸಲ್ಲಿಸಿದ ಸೇವೆಗಳನ್ನು ವಿವರಿಸಿದರು. ವಿದ್ಯಾರ್ಥಿ ಜೀವನದಲ್ಲಿಯೇ ಭವಿಷ್ಯದ ಬಗ್ಗೆ ನಿಖರ ಗುರಿ ಹೊಂದಬೇಕೆಂದು ಅವರು ಸಲಹೆ ನೀಡಿದರು. ಈ ಹಿಂದೆ ಜಿಲ್ಲೆಯಲ್ಲಿದ್ದ ಫೈರಿಂಗ್ ರೇಂಜ್‌ಗಳು ಪ್ರಸ್ತುತ ಒತ್ತುವರಿಗೆ ತುತ್ತಾಗಿರುವ ಬಗ್ಗೆ ಅವರು ವಿಷಾದ ವ್ಯಕ್ತಪಡಿಸಿದರು. ಇದೀಗ ಫೀಲ್ಡ್ ಮಾರ್ಷಲ್ ಕಾರ್ಯಪ್ಪ ಕಾಲೇಜು ಮೈದಾನದಲ್ಲಿಯೇ ಫೈರಿಂಗ್ ರೇಂಜ್ ನಿರ್ಮಿಸಿರುವುದಕ್ಕೆ ಫೀಲ್ಡ್ ಮಾರ್ಷಲ್ ಕಾರ್ಯಪ್ಪ ಕಾಲೇಜಿನ ಹಳೇ ವಿದ್ಯಾರ್ಥಿ ಸಂಘವನ್ನು ಅಭಿನಂದಿಸಿದರು.

ಫೀಲ್ಡ್ ಮಾರ್ಷಲ್ ಕಾರ್ಯಪ್ಪ ಕಾಲೇಜಿನ ಹಳೇ ವಿದ್ಯಾರ್ಥಿ ಸಂಘದ ಅಧ್ಯಕ್ಷ ಬೊಳ್ಳಜ್ಜಿರ ಅಪ್ಪಯ್ಯ ಮಾತನಾಡಿ, ಫೀಲ್ಡ್ ಮಾರ್ಷಲ್ ಕಾರ್ಯಪ್ಪ ಕಾಲೇಜಿನಲ್ಲಿ ವಿದ್ಯಾಭ್ಯಾಸ ಮಾಡಿದ ವಿದ್ಯಾರ್ಥಿಗಳು ಭಾರತೀಯ ಸೇನೆ ಸೇರಿದಂತೆ ಉನ್ನತ ಹುದ್ದೆಗಳಲ್ಲಿ ಸೇವೆ ಸಲ್ಲಿಸಿದ್ದಾರೆ. ಶ್ರೀಲಂಕಾದಲ್ಲಿ ನಡೆದಿದ್ದ ಕಾರ್ಯಾಚರಣೆಯಲ್ಲಿ ಇದೇ ಕಾಲೇಜಿನ ಮಾಜಿ ವಿದ್ಯಾರ್ಥಿ, ಸೇನಾಧಿಕಾರಿ ಪುಟ್ಟಿಚಂಡ ಎಸ್.ಗಣಪತಿ ಅವರು ಮೊದಲ ವೀರ ಚಕ್ರ ಪ್ರಶಸ್ತಿಗೂ ಪಾತ್ರರಾಗಿದ್ದಾರೆ. ಇಂತಹ ಹತ್ತಾರು ಅಮೂಲ್ಯ ಸೇನಾಧಿಕಾರಿಗಳನ್ನು ಫೀಲ್ಡ್ ಮಾರ್ಷಲ್ ಕಾರ್ಯಪ್ಪ ಕಾಲೇಜು ದೇಶಕ್ಕೆ ಕೊಡುಗೆಯಾಗಿ ನೀಡಿದೆ ಎಂದು ಹೆಮ್ಮೆ ವ್ಯಕ್ತಪಡಿಸಿದರು. ಫೀಲ್ಡ್ ಮಾರ್ಷಲ್ ಕಾರ್ಯಪ್ಪ ಕಾಲೇಜಿಗೆ ಹಳೇ ವಿದ್ಯಾರ್ಥಿ ಸಂಘದ ಸಹಕಾರ, ಬೆಂಬಲ ಸದಾ ಇರಲಿದೆ ಎಂದು ಅಭಯ ನೀಡಿದರು.

ಫೀಲ್ಡ್ ಮಾರ್ಷಲ್ ಕಾರ್ಯಪ್ಪ ಕಾಲೇಜಿನ ಪ್ರಾಂಶುಪಾಲರಾದ ಮೇಜರ್‌ಪ್ರೋ. ಬಿ. ರಾಘವ, ಕಾಲೇಜಿನ ಮಾಜಿ ವಿದ್ಯಾರ್ಥಿ, ವಕೀಲರಾದ ಮುಂಡಂಡ ಸುದೈಯ್ ನಾಣಯ್ಯ ಮಾತನಾಡಿದರು.

19ನೇ ಕರ್ನಾಟಕ ಬೆಟಾಲಿಯನ್ ಎನ್‌ಸಿಸಿ ಕಮಾಂಡಿಂಗ್ ಆಫೀಸರ್‌ಕರ್ನಲ್ ರೆಜಿತ್ ಮುಕುಂದನ್, ಕೊಡಗು ವಿ.ವಿ ಉಪ ಕುಲಪತಿ ಪ್ರೋ.ಅಶೋಕ್ ಸಂಗಪ್ಪ ಆಲೂರು, ಪ್ರಾಂಶುಪಾಲರಾದ ಮೇಜರ್‌ಪ್ರೋ. ಬಿ. ರಾಘವ, ನಿವೃತ್ತ ಎಸ್.ಪಿ. ಮುಕ್ಕಾಟಿರ ಎ. ಅಪ್ಪಯ್ಯ, ವಕೀಲರಾದ ಮುಂಡಂಡ ಸುದೈಯ್ ನಾಣಯ್ಯ, ಹಳೇ ವಿದ್ಯಾರ್ಥಿ ಸಂಘದ ಅಧ್ಯಕ್ಷ ಬೊಳ್ಳಜ್ಜಿರ ಅಪ್ಪಯ್ಯ, ರೈಫಲ್ ರೇಂಜ್ ಗುತ್ತಿಗೆದಾರ ಪರಮೇಶ್, ಎನ್‌ಸಿಸಿ ಅಧಿಕಾರಿಗಳು ಮತ್ತು ಸೇನಾ ಸಿಬ್ಬಂದಿಗಳನ್ನು ಇದೇ ಸಂದರ್ಭ ಫೀಲ್ಡ್ ಮಾರ್ಷಲ್ ಕಾರ್ಯಪ್ಪ ಕಾಲೇಜಿನ ಹಳೇ ವಿದ್ಯಾರ್ಥಿ ಸಂಘದ ಮೂಲಕ ಸನ್ಮಾನಿಸಿ ಗೌರವಿಸಲಾಯಿತು.

ಹಳೇ ವಿದ್ಯಾರ್ಥಿ ಸಂಘದ ಪ್ರಮುಖರಾದ ಬೊಟ್ಟಂಗಡ ಗಣಪತಿ, ಶ್ಯಾಮ್, ಪತ್ರಕರ್ತ ಚಂದನ್ ನಂದರಬೆಟ್ಟು, ಸಾಹಿತಿ ರಶ್ಮಿ ಮೇದಪ್ಪ, ಉದ್ಯಮಿ ದಮಯಂತಿ, ಕಾಲೇಜಿನ ಉಪನ್ಯಾಸಕರಾದ ರವಿಶಂಕರ್, ಕೃಷ್ಣ, ಕಾಲೇಜು ಸಿಬ್ಬಂದಿ, ಎನ್‌ಸಿಸಿ ಕೆಡೆಟ್‌ಗಳು ಹಾಜರಿದ್ದರು.

ಕೊಡಗಿನ ವಿವಿಧೆಡೆ ಭರ್ಜರಿ ಮಳೆ

ಮಡಿಕೇರಿ: ಕೊಡಗು ಜಿಲ್ಲೆಯ ವಿವಿಧ ಕಡೆಗಳಲ್ಲಿ ಮಂಗಳವಾರ ಸಂಜೆ ಹಾಗೂ ರಾತ್ರಿ ಮಳೆಯಾಗಿದೆ. ಕಳೆದ ಹಲವು ದಿನಗಳಿಂದ ಬಿಸಿಲಿನ ವಾತಾವರಣ ಕೂಡಿದ್ದ ಜಿಲ್ಲೆಯಲ್ಲಿ ಮಳೆಯಾಗಿರುವುದು ರೈತರಲ್ಲಿ ಸಂತಸ ಮೂಡಿಸಿದೆ. ಮಳೆಯಿಂದಾಗಿ ಇಳೆ ತಂಪಾಗಿದ್ದು, ಉತ್ತಮ ವಾತಾವರಣ ಕಂಡುಬಂದಿದೆ.

ಜಿಲ್ಲಾ ಕೇಂದ್ರ ಮಡಿಕೇರಿಯಲ್ಲಿ ರಾತ್ರಿ ಕೆಲ ಕಾಲ ಭರ್ಜರಿಯಾಗಿ ಮಳೆ ಸುರಿಯಿತು. ಉಳಿದಂತೆ ಸಿದ್ದಾಪುರ, ಸುಂಟಿಕೊಪ್ಪ, ಎಡಪಾಲ, ಕುಂದಚೇರಿ, ಕುಟ್ಟಂದಿ, ಬಿಟ್ಟಂಗಾಲ, ಪಾಲಿಬೆಟ್ಟ, ವಿ. ಬಾಡಗ, ಬಾವಲಿ, ಹಾತೂರು, ತಿತಿಮತಿ, ಕೈಕೇರಿ, ಸುಳುಗೋಡು, ನೋಕ್ಯಾ, ನಲ್ಲೂರು, ಕುಟ್ಟ, ಬಿರುನಾಣಿ, ಜೋಡುಬೀಟಿ, ಕುಗ್ಗಾಲು, ಕಡಗದಾಳು, ಶ್ರೀಮಂಗಲ, ಕುಂದ, ಕೊಳತೋಡು, ಮೈತಾಡಿ ಸೇರಿದಂತೆ ಹಲವು ಕಡೆಯಲ್ಲಿ ಮಳೆಯ ಸಿಂಚನವಾಗಿದೆ.

ಶನಿವಾರಸಂತೆ: ಒಕ್ಕಲಿಗರ ಸಂಘ ನೂತನ ಕಟ್ಟಡ ಭೂಮಿ ಪೂಜೆ



• **ಕನ್ನಡಪ್ರಭವಾರ್ತೆ** ಶನಿವಾರಸಂತೆ

ಕುಲ ಗುರುಗಳು ಹೇಳಿಕೊಟ್ಟ ಸಂಸ್ಕೃತಿ ಸಂಸ್ಕಾರ ಅಡಿಪಾಯದಲ್ಲಿ ನಾವು ಮುನ್ನಡೆದರೆ ಮಾತ್ರ ಸಮುದಾಯವೊಂದು ಬೆಳೆಯಲು ಸಾಧ್ಯವಾಗುತ್ತದೆ ಎಂದು ಆದಿಚುಂಚನಗಿರಿ ಹಾಸನ ಮತ್ತು ಕೊಡಗು ಶಾಖಾ ಮಠದ ಶ್ರೀ ಶಂಬುನಾಥ ಸ್ವಾಮೀಜಿ ಹೇಳಿದರು.

ಅವರು ಶನಿವಾರಸಂತೆ ಒಕ್ಕಲಿಗರ ನೂತನ ಸಂಘದ ಉದ್ಘಾಟನೆಮತ್ತು ಚಿನ್ನಳ್ಳಿಯಲ್ಲಿನಿರ್ಮಾಣವಾಗಲಿರುವ ಸಂಘದ ಕಟ್ಟಡ ನಿರ್ಮಾಣಕ್ಕೆ ಭೂಮಿ ಪೂಜೆ ನೆರವೇರಿಸಿದ ಬಳಿಕ ಪಟ್ಟಣದ ಯಶಸ್ವಿ ಕಲ್ಯಾಣ ಮಂಟಪದಲ್ಲಿ ನಡೆದ ಸಮಾರಂಭದಲ್ಲಿ ಮಾತನಾಡುತ್ತಿದ್ದರು.

ಆದಿಚುಂಚನಗಿರಿ ಸಂಸ್ಥಾನದ ಮೂಲ ಗುರುಗಳ ಕೃಪಾಕಟಾಕ್ಷ ಮತ್ತು ಸಂಸ್ಥಾನ ಮಠದ ಶ್ರೀ ಬಾಲಗಂಗಾಧರನಾಥ ಸ್ವಾಮೀಜಿಯವರು ಕುಲದ ಬೆಳವಣಿಗೆ ಮತ್ತು ಸಮಾಜದ ಬೆಳವಣಿಗೆಗೆ ಮಾಡಿಕೊಟ್ಟಿರುವ ದೂರದೃಷ್ಟಿ, ಮಾರ್ಗದರ್ಶನದ ದಾರಿಯಲ್ಲಿ ಒಕ್ಕಲಿಗ ಸಮುದಾಯ ಮುನ್ನಡೆಯಬೇಕಿದೆ ಎಂದು ಹೇಳಿದರು. ರಾಜ್ಯ ಒಕ್ಕಲಿಗರ ಸಂಘದ ನಿರ್ದೇಶಕ ಹರಪಳ್ಳಿ ರವಿಂದ್ರ ಮಾತನಾಡಿ- ಬೆಂಗಳೂರು ನಿರ್ಮಾಣಕರ್ತ ಕೆಂಪೇಗೌಡರು, ಆದಿಚುಂಚನಗಿರಿ ಸಂಸ್ಥಾನ ಮಠ, ಮಾಜಿ ಪ್ರಧಾನಿ ದೇವೇಗೌಡ, ಎಸ್.ಎಂ.ಕೃಷ್ಣರಂತಹ ರಾಜಕಿಯ ಕಲಿಗಳು ಇನ್ನು ಮುಂತಾದವರು ಒಕ್ಕಲಿಗ ಸಮುದಾಯದಲ್ಲಿ ಜನಿಸಿರುವುದು ನಮಗೆ ಹೆಮ್ಮೆಯಾಗುತ್ತದೆ ಎಂದರು.

ರಾಜ್ಯ ಒಕ್ಕಲಿಗರ ಸಂಘವು ಸಮುದಾಯದ ವಿದ್ಯಾರ್ಥಿ ನಿಲಯ ಮತ್ತು ಸಂಘದ ಬೆಳವಣಿಗೆಗೆ ಸರ್ಕಾರದಿಂದ 10 ಕೋಟಿ ರು. ಅನುದಾನ ನೀಡಿದೆ ಎಂದರು

ಮಾಜಿ ಶಾಸಕ ಮತ್ತು ಸಕಲೇಶಪುರ ಒಕ್ಕಲಿಗರ ಸಂಘದ ಅಧ್ಯಕ್ಷ ಎಚ್.ಎಂ ವಿಶ್ವನಾಥ್ ಮಾತನಾಡಿ-ಸಂಘ, ಸಂಘಟನೆ ಪ್ರಬಲವಾದರೆ ಸಮೂದಾಯವೂ ಪ್ರಬಲಗೊಳ್ಳುತ್ತದೆ ಎಂದರು.

ಒಕ್ಕಲಿಗರ ಸಂಘದ ಹಾಸನ ಜಿಲ್ಲಾಧ್ಯಕ್ಷ ಮುದ್ದೇಗೌಡ, ಕೊಡಗು ಜಿಲ್ಲಾಧ್ಯಕ್ಷ ಎಸ್.ಎಂ. ಚಂಗಪ್ಪ, ಸಕಲೇಶಪುರ ಮಾಜಿ ತಾ.ಪಂ.ಅಧ್ಯಕ್ಷ ನಾಗರಾಜ್ ಮಾತನಾಡಿದರು. ಶನಿವಾರಸಂತೆ ಒಕ್ಕಲಿಗರ ಸಂಘದ ಅಧ್ಯಕ್ಷ ಕೇಶವೇಗೌಡ ಅಧ್ಯಕ್ಷತೆವಹಿಸಿದ ಸಮಾರಂಭದಲ್ಲಿ ಸಂಘದ ಕಾರ್ಯದರ್ಶಿ ಹರೀಶ್‌ಕುಮಾರ್, ಒಕ್ಕಲಿಗ ಪ್ರಮುಖರಾದ ವಿನೋದ್‌ಚಂದ್ರ, ಚೈತ್ರ, ಮುತ್ತಣ್ಣ, ಗಿರೀಶ್‌ಮಲ್ಲಪ್ಪ, ಭರತ್‌ಕುಮಾರ್, ಚಂದ್ರಿಕಾಕುಮಾರ್ ಇನ್ನು ಮುಂತಾದ ಪ್ರಮುಖರು ಇದ್ದರು.

ಕ್ರೀಡೆ ಚಾಂಪಿಯನ್ ತಂಡಕ್ಕೆ 2 ಲಕ್ಷ ರು. ನಗದು | ಯಿಫಾ ಸಂಘಟನೆ ಕ್ರೀಡಾಕೂಟ ಆಯೋಜನೆ

ರಾಜ್ಯಮಟ್ಟದ ಹಾಕಿ ಚಾಂಪಿಯನ್‌ಶಿಪ್: ಟ್ರೈಸ್ ಬಿಡುಗಡೆ



■ ಸಿಂಥೆಟಿಕ್ ಟರ್ಫ್ ಮೈದಾನದಲ್ಲಿ 7 ರಿಂದ 10ರವರೆಗೆ ಆಯೋಜಿಸಿರುವ ರಾಜ್ಯಮಟ್ಟದ ಯಿಫಾ ಹಾಕಿ ಚಾಂಪಿಯನ್ಸ್ ಟ್ರೋಫಿ ಕ್ರೀಡಾಕೂಟದ ಟ್ರೈಸ್ ಅನ್ನು ಮಾಜಿ ಕ್ರೀಡಾ ಸಚಿವ ಎಂ.ಪಿ. ಅಪ್ಪಚ್ಚು ರಂಜನ್ ಭಾನುವಾರ ಬಿಡುಗಡೆಗೊಳಿಸಿದರು.

• **ಕನ್ನಡಪ್ರಭವಾರ್ತೆ** ಸೋಮವಾರಪೇಟೆ

ಯಂಗ್ ಇಂಡಿಯನ್ ಫಾರ್ಮರ್ಸ್ ಅಸೋಸಿಯೇಷನ್ ವತಿಯಿಂದ ಸಿಂಥೆಟಿಕ್ ಟರ್ಫ್ ಮೈದಾನದಲ್ಲಿ 7 ರಿಂದ 10ರವರೆಗೆ ಆಯೋಜಿಸಿರುವ ರಾಜ್ಯಮಟ್ಟದ ಯಿಫಾ ಹಾಕಿ ಚಾಂಪಿಯನ್ಸ್ ಟ್ರೋಫಿ ಕ್ರೀಡಾಕೂಟದ ಟ್ರೈಸ್ ಅನ್ನು ಮಾಜಿ ಕ್ರೀಡಾ ಸಚಿವ ಎಂ.ಪಿ. ಅಪ್ಪಚ್ಚು ರಂಜನ್ ಭಾನುವಾರ ಬಿಡುಗಡೆಗೊಳಿಸಿದರು.

ತಮ್ಮ ಗೃಹ ಕಚೇರಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಟ್ರೈಸ್ ಬಿಡುಗಡೆಗೊಳಿಸಿ ಮಾತನಾಡಿದ ಅವರು, ಕೊಡಗಿನ ಮಣ್ಣಿನಲ್ಲಿ ಕ್ರೀಡೆ ಅಡಗಿದೆ. ಈ ಭೂಮಿ ನಿಸರ್ಗದ ಸೃಷ್ಟಿಯ ಸೊಬಗು. ಪ್ರಪಂಚದ ಯಾವುದೇ ಮೂಲೆಗೆ ಹೋದರೂ ಕೊಡಗಿನಂತಹ ವಾತಾವರಣ ಸಿಗುವುದಿಲ್ಲ. ಇಲ್ಲಿ ಸಾಕಷ್ಟು ಕ್ರೀಡಾಪಟುಗಳು ದೇಶ ವಿದೇಶಗಳಲ್ಲಿ ದೇಶಕ್ಕೆ ಹೆಸರನ್ನು ತಂದಿದ್ದಾರೆ. ಇನ್ನೂ ಹೆಚ್ಚಿನ ಕ್ರೀಡಾಪಟುಗಳು ದೇಶಕ್ಕೆ ಹೆಸರನ್ನು ತರಬೇಕೆಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಯಂಗ್ ಇಂಡಿಯನ್ ಫಾರ್ಮರ್ಸ್ ಅಸೋಸಿಯೇಷನ್‌ನ ಅಧ್ಯಕ್ಷ ಶ್ರೀನಿಧಿ ಲಿಂಗಪ್ಪ ಮಾತನಾಡಿ, ಜಿಲ್ಲೆಯಲ್ಲಿ 25 ವರ್ಷಗಳ ನಂತರ ರಾಜ್ಯಮಟ್ಟದ ಹಾಕಿ ಪಂದ್ಯಾವಳಿ ಆಯೋಜಿಸಲಾಗಿದೆ. ಪಂದ್ಯಾಟದಲ್ಲಿ ಚಾಂಪಿಯನ್ ಆಗಿ ಹೊರಹೊಮ್ಮುವ ತಂಡಕ್ಕೆ2 ಲಕ್ಷ ರು. ನಗದು ಹಾಗೂ ಆಕರ್ಷಕ ಟ್ರೋಫಿ, ದ್ವಿತೀಯ ಸ್ಥಾನ ಪಡೆಯುವ ತಂಡಕ್ಕೆ 1 ಲಕ್ಷ ರು. ನಗದು ಹಾಗೂ ಟ್ರೋಫಿ, ತೃತೀಯ ಸ್ಥಾನ ಪಡೆಯುವ ತಂಡಕ್ಕೆ 50 ಸಾವಿರ ರು. ನಗದು ಹಾಗೂ ಟ್ರೋಫಿ ನೀಡಲಾಗುವುದು. ಇದರೊಂದಿಗೆ ವೈಯುಕ್ತಿಕ ವಿಭಾಗದಲ್ಲಿಯೂ ಪ್ರಶಸ್ತಿಗಳನ್ನು ವಿತರಿಸಲಾಗುವುದು ಎಂದರು.

ಕಾರ್ಯಕ್ರಮದಲ್ಲಿ ಯಿಫಾ ಸಂಘಟನೆಯ ಉಪಾಧ್ಯಕ್ಷ ಹರ್ಷಿತ್ ಶಿವಪ್ಪ, ಕಾರ್ಯದರ್ಶಿ ಸಜನ್ ಮಂದಣ್ಣ, ಖಜಾಂಚಿ ಮೋಹಿತ್ ತಿಮ್ಮಯ್ಯ ಸೇರಿದಂತೆ ಪದಾಧಿಕಾರಿಗಳು, ಮಹಿಳಾ ಘಟಕದ ಸದಸ್ಯರುಗಳು ಇದ್ದರು.

ಸುದ್ದಿ ಸಿಂಚನ

ನೀಟ್ ಫಲಿತಾಂಶ ಆತಂಕ: ಮನೆ ಬಿಟ್ಟು ತೆರಳಿದ ವಿದ್ಯಾರ್ಥಿ ಪತ್ತೆ

ಉಡುಪಿ: ನೀಟ್ ಪರೀಕ್ಷೆಯಲ್ಲಿ ಕಡಿಮೆ ಅಂಕ ಬರಬಹುದೆಂಬ ಆತಂಕದಿಂದ ಮನೆ ಬಿಟ್ಟು ತೆರಳಿದ್ದ ವಿದ್ಯಾರ್ಥಿಯನ್ನು ಕೋಟ ಪೊಲೀಸರು ಕ್ಷಿಪ್ರ ಕಾರ್ಯಾಚರಣೆ ನಡೆಸಿ ಸಕಲೇಶಪುರದಲ್ಲಿ ಪತ್ತೆ ಹಚ್ಚುವಲ್ಲಿ ಯಶಸ್ವಿಯಾಗಿದ್ದಾರೆ. ನಾಪತ್ತೆಯಾಗಿದ್ದ ವಿದ್ಯಾರ್ಥಿಯನ್ನು ಕೋಟ ಮೂರುಕೈ ನಿವಾಸಿ ಅಭಿಷೇಕ್ (17) ಎಂದು ಗುರುತಿಸಲಾಗಿದೆ. ಆತ ಹಾಸ್ಟೆಲ್‌ನಲ್ಲಿ ವಾಸವಾಗಿದ್ದ. ಮೇ 3ರಂದು ಉಡುಪಿಯಲ್ಲಿ ನೀಟ್ ಪರೀಕ್ಷೆ ಬರೆದಿದ್ದು, ಮೇ 4ರಂದು ಹಾಸನದಲ್ಲಿರುವ ತಾಯಿಗೆ ಕರೆ ಮಾಡಿ ಮನೆಯಿಂದ ಮಣಿಪಾಲಕ್ಕೆ ಹೋಗುವುದಾಗಿ ತಿಳಿಸಿದ್ದ. ಆದರೆ ಸಂಜೆಯಾದರೂ ಮನೆಗೆ ವಾಪಸ್ಸಾಗದೇ ಇದ್ದುದರಿಂದ ಆತಂಕಗೊಂಡ ಪೋಷಕರು ಹುಡುಕಾಟ ಆರಂಭಿಸಿದರು. ಈ ವೇಳೆ ಮನೆಯಲ್ಲಿ ಅಭಿಷೇಕ್ ಬರೆದಿಟ್ಟಿದ್ದ ಪತ್ರ ಪತ್ತೆಯಾಗಿದ್ದು, ಅದರಲ್ಲಿ ನೀಟ್ ಪರೀಕ್ಷೆಯಲ್ಲಿ ಕಡಿಮೆ ಅಂಕ ಬರಬಹುದೆಂಬ ಭೀತಿಯನ್ನು ವ್ಯಕ್ತಪಡಿಸಿದ್ದಾನೆ ಎಂದು ತಿಳಿದುಬಂದಿದೆ. ಪ್ರಕರಣ ದಾಖಲಾಗುತ್ತಿದ್ದಂತೆಯೇ ಕೋಟ ಠಾಣೆಯ ಪೊಲೀಸರು ತಕ್ಷಣ ಕಾರ್ಯಪ್ರವೃತ್ತರಾಗಿ, ಅಭಿಷೇಕ್ ಧರ್ಮಸ್ಥಳದ ಮೂಲಕ ಸಕಲೇಶಪುರ ಕಡೆ ತೆರಳಿರುವ ಮಾಹಿತಿ ದೊರೆತಿದ್ದು, ಆತನನ್ನು ಸುರಕ್ಷಿತವಾಗಿ ಪತ್ತೆ ಹಚ್ಚಿ ಕರೆ ತಂದಿದ್ದಾರೆ. ನೀಟ್ ಪರೀಕ್ಷೆಯ ಫಲಿತಾಂಶದ ಭೀತಿಯಿಂದ ಮಾನಸಿಕ ಖಿನ್ನತೆಗೆ ಒಳಗಾಗಿದ್ದ ಆತ ಮನೆ ಬಿಟ್ಟು ಹೋಗಿದ್ದ ಎಂದು ತಿಳಿಸಲಾಗಿದೆ.

9, 10ರಂದು ರಾಜ್ಯ ಮಟ್ಟದ ಹಿರಿಯರ ಕ್ರಿಕೆಟ್ ಹಬ್ಬ



ಕ್ಲಬ್ ಪ್ರಧಾನ ಕಾರ್ಯದರ್ಶಿ ಕಿರಣ್ ಹೊಸಬೆಟ್ಟು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

• **ಕನ್ನಡಪ್ರಭ ವಾರ್ತೆ** ಮಂಗಳೂರು

ಸುರತ್ಕಲ್ ಸ್ಪೋರ್ಟ್ಸ್ ಆ್ಯಂಡ್ ಕಲ್ಚರಲ್ ಕ್ಲಬ್ ಸುರತ್ಕಲ್ ಮತ್ತು ಸುರತ್ಕಲ್ ಸ್ಪೋರ್ಟ್ಸ್ ಆ್ಯಂಡ್ ಕಲ್ಚರಲ್ ಸೇವಾ ಟ್ರಸ್ಟ್ ಜಂಟಿ ಆಶ್ರಯದಲ್ಲಿ ರಾಜ್ಯ ಮಟ್ಟದ 45 ವರ್ಷ ಮೇಲ್ಪಟ್ಟ ಆಟಗಾರರ ತಂಡಗಳ ಓವರ್ ಆರ್ಮ್ ಲಿಜೆಂಡ್ಸ್ ಕ್ರಿಕೆಟ್ ಲೀಗ್ ಸೀಸನ್ 5 'ಹಿರಿಯರ ಕ್ರಿಕೆಟ್ ಹಬ್ಬ' ಮೇ 9 ಮತ್ತು 10ರಂದು ಸುರತ್ಕಲ್ ಗೋವಿಂದದಾಸ ಕಾಲೇಜು ಕ್ರೀಡಾಂಗಣದಲ್ಲಿ ನಡೆಯಲಿದೆ ಎಂದು ಕ್ಲಬ್ ಪ್ರಧಾನ ಕಾರ್ಯದರ್ಶಿ ಕಿರಣ್ ಹೊಸಬೆಟ್ಟು ತಿಳಿಸಿದರು.

ಅವರು ಮಂಗಳವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ ಅವರು, ಮೇ 9ರಂದು ಬೆಳಗ್ಗೆ 8 ಗಂಟೆಗೆ ಉದ್ಘಾಟನಾ ಸಮಾರಂಭ ನಡೆಯಲಿದೆ. ಮುಂಬಯಿ ಬಂಟರ ಸಂಘದ ಮಾಜಿ ಅಧ್ಯಕ್ಷ ಡಾ.ಪಿ.ವಿ.ಶೆಟ್ಟಿ ಮುಂಬಯಿ ಅಧ್ಯಕ್ಷತೆ ವಹಿಸುವರು. ಚಿತ್ರಾಪುರ ಶ್ರೀ ದುರ್ಗಾಪರಮೇಶ್ವರಿ ದೇವಸ್ಥಾನ ಮತ್ತು ಮಠದ ಏಕಮಾತ್ರ ಅನುವಂಶಿಕ ಆಡಳಿತ ಮೊಕ್ತೇಸರ ಶ್ರೀ ವಿದ್ಯೇಂದ್ರತೀರ್ಥ ಶ್ರೀಪಾದರು ಆಶೀರ್ವಚನ ನೀಡುವರು. ಇಡ್ಯಾ ಶ್ರೀ ಮಹಾಲಿಂಗೇಶ್ವರ ದೇವಸ್ಥಾನದ ಅನುವಂಶಿಕ ಆಡಳಿ ಮೊಕ್ತೇಸರ ವೇ.ಮೂ.ಥೈ.ರಮಾನಂದ ಭಟ್ ಮತ್ತು ಶ್ರೀ ಮೂಕಾಂಬಿಕಾ ತಡಂಬೈಲ್ ಸುರತ್ಕಲ್ ಜ್ಯೋತಿಷ್ಯರಾದ ನಾಗೇಂದ್ರ ಭಾರಧ್ವಾಜ್ ದೀಪ ಪ್ರಜ್ವಲನೆ ಮಾಡುವರು. ಅಸ್ತ್ರ ಸಮೂಹ ಸಂಸ್ಥೆ ಆಡಳಿತ ನಿರ್ದೇಶಕ ಲಾಂಚುಲಾಲ್ ಪಂದ್ಯಾಟ ಉದ್ಘಾಟಿಸುವರು. ಮೇ 10ರಂದು ಸಂಜೆ 5ಕ್ಕೆ ಸಮಾರೋಪ ಸಮಾರಂಭ ನಡೆಯಲಿದ್ದು, ಕ್ಲಬ್‌ನ ಅಧ್ಯಕ್ಷ ಮಹಾಬಲ ಪೂಜಾರಿ ಅಧ್ಯಕ್ಷತೆ ವಹಿಸುವರು. ಸೇವ್ ಲೈಫ್ ಚಾರಿಟೇಬಲ್ ಟ್ರಸ್ಟ್‌ನ ಅರ್ಜುನ್ ಭಂಡಾರ್ಕರ್ ಬಹುಮಾನ ವಿತರಿಸುವರು. ಹಲವು ಗಣ್ಯರು ಭಾಗವಹಿಸುವರು.

ಪ್ರಥಮ ಬಹುಮಾನ ಟ್ರೋಫಿ ಹಾಗೂ ನಗದು 1,00,005 ರು., ದ್ವಿತೀಯ ಬಹುಮಾನ ಟ್ರೋಫಿ ಹಾಗೂ ನಗದು 50,005 ರು., ತೃತೀಯ ಮತ್ತು ಚತುರ್ಥ ಬಹುಮಾನ ಆಕರ್ಷಕ ಟ್ರೋಫಿ ಎಂದು ಪಂದ್ಯಾಟದ ಬಗ್ಗೆ ಮಾಹಿತಿ ನೀಡಿದರು.

ಕ್ಲಬ್ ಅಧ್ಯಕ್ಷ ಮಹಾಬಲ ಪೂಜಾರಿ, ಸದಸ್ಯ ಪುಷ್ಪರಾಜ್ ಶೆಟ್ಟಿ ಇದ್ದರು.

ಎಸ್‌ಎಂವಿಐಟಿ ವಿದ್ಯಾರ್ಥಿಗಳಿಗೆ ಹ್ಯಾಕಥಾನ್ ಬಹುಮಾನ



ಬಂಟಕಲ್ ಎಸ್‌ಎಂವಿಐಟಿ ವಿದ್ಯಾರ್ಥಿಗಳಿಗೆ ಹ್ಯಾಕಥಾನ್ ಸ್ಪರ್ಧೆಯಲ್ಲಿ ದ್ವಿತೀಯ ಬಹುಮಾನ ಲಭಿಸಿದೆ

• **ಕನ್ನಡಪ್ರಭ ವಾರ್ತೆ** ಕಾಪು

ಇಲ್ಲಿನ ಬಂಟಕಲ್‌ನ ಶ್ರೀ ಮಧ್ವ ವಾದಿರಾಜ ತಾಂತ್ರಿಕ ಮಹಾವಿದ್ಯಾಲಯದ ವಿದ್ಯಾರ್ಥಿಗಳಾದ ಪಿ. ಪ್ರಮೋದ್ ರಾವ್, ಸಾಗರ್‌ಎಸ್., ಮೋಹಿತ್ ಕೋಟ್ಯಾನ್ ಮತ್ತು ಪ್ರದ್ಯುನ್ಮಾ ಶೆಟ್ಟಿಗಾರ್‌ಇವರು ನಿರ್ಮಿಸಿದ್ದ ವಿಜ್ಞಾನ ಮಾದರಿಗೆ ಸೃಷ್ಟಿ2026' ರಾಜ್ಯ ಮಟ್ಟದ ತಾಂತ್ರಿಕ ಪ್ರಾಜೆಕ್ಟ್ ಪ್ರದರ್ಶನ ಮತ್ತು ಹ್ಯಾಕಥಾನ್‌ನಲ್ಲಿ ದ್ವಿತೀಯ ಬಹುಮಾನ ಪಡೆದಿರುತ್ತಾರೆ.

ಈ ಸ್ಪರ್ಧೆಯನ್ನು ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಕಾಲೇಜ್ ಆಫ್ ಇಂಜಿನಿಯರಿಂಗ್ ಆಂಡ್ ಟೆಕ್ನಾಲಜಿಯು ಅಖಿಲ ಭಾರತ ವಿದ್ಯಾರ್ಥಿ ಪರಿಷತ್ ಇದರ ಸಹಯೋಗದೊಂದಿಗೆ ಸೃಷ್ಟಿ ಇನೋವೇಟಿವ್ ಎಕ್ಸ್‌ಚೇಂಜ್ 2026 ಕಾರ್ಯಕ್ರಮದ ಅಂಗವಾಗಿ ಏ. 28ರಿಂದ 30ರವರೆಗೆ ಆಯೋಜಿಸಿತ್ತು.

ವಿದ್ಯಾರ್ಥಿಗಳು ಆಧುನಿಕ ತಂತ್ರಜ್ಞಾನವನ್ನು ಬಳಸಿಕೊಂಡು ಅಭಿವೃದ್ಧಿಪಡಿಸಿದ ಈ ಪ್ರಾಜೆಕ್ಟ್ ಮೂಲಕ ಆರೋಗ್ಯ ಸೇವೆಯಲ್ಲಿ ಎದುರಾಗುವ ಸವಾಲುಗಳನ್ನು ಪರಿಹರಿಸುವ ಮೂಲಕ ಸೇವೆಗಳ ಕಾರ್ಯಕ್ಷಮತೆಯನ್ನು ಹೆಚ್ಚಿಸುವ ಉದ್ದೇಶವನ್ನು ಹೊಂದಿದೆ.

ವಿದ್ಯಾರ್ಥಿಗಳ ಈ ಸಾಧನೆಗೆ ಸಂಸ್ಥೆಯ ಆಡಳಿತ ಮಂಡಳಿಯವರು, ಪ್ರಾಂಶುಪಾಲರು ಹೃತ್ಪೂರ್ವಕ ಅಭಿನಂದನೆಗಳನ್ನು ವ್ಯಕ್ತಪಡಿಸಿರುತ್ತಾರೆ. ಈ ರೀತಿಯ ಯಶಸ್ಸು ವಿದ್ಯಾರ್ಥಿಗಳ ನಿಷ್ಠೆ, ಶ್ರಮ ಹಾಗೂ ಶಿಕ್ಷಣದ ಗುಣಮಟ್ಟವನ್ನು ಪ್ರತಿಬಿಂಬಿಸುತ್ತದೆ ಎಂದು ತಿಳಿಸಿದ್ದಾರೆ.

ಹೂಡಿಕೆ ನೆಪದಲ್ಲಿ ವೃದ್ಧರಿಗೆ 18 ಲಕ್ಷ ರು. ವಂಚನೆ

• **ಕನ್ನಡಪ್ರಭ ವಾರ್ತೆ** ಮಂಗಳೂರು

ಆನ್‌ಟ್ರೇಡಿಂಗ್, ಹೂಡಿಕೆ ನೆಪದಲ್ಲಿ 75 ವರ್ಷದ ವ್ಯಕ್ತಿಯೋರ್ವರು 18 ಲಕ್ಷ ರು.ಗೂ ಅಧಿಕ ಹಣ ಕಳೆದುಕೊಂಡಿರುವ ಘಟನೆ ಮಂಗಳೂರಿನಲ್ಲಿ ನಡೆದಿದೆ.

75 ವರ್ಷದ ವಂಚನೆಗೊಳಗಾದ ವ್ಯಕ್ತಿ 2025ರ ಡಿ.6ರಂದು ಮೊಬೈಲ್‌ನಲ್ಲಿ ಫೇಸ್ ಬುಕ್ ನೋಡುವಾಗ ಆನ್‌ಲೈನ್ ಟ್ರೇಡಿಂಗ್ ಬಗ್ಗೆ ನಿರ್ಮಲಾ ಸೀತಾರಾಮನ್ ಸ್ಪೀಚ್ ಇರುವ ವಿಡೀಯೋ ನೋಡಿ ಆನ್‌ಲೈನ್ ಟ್ರೇಡಿಂಗ್ ಮಾಡುವ ಉದ್ದೇಶದಿಂದ ಅದರ ಕೆಳಗೆ ಇದ್ದ ಲಿಂಕ್ ನ್ನು ಕ್ಲಿಕ್ ಮಾಡಿ, ನೋಂದಾಯಿಸಿದ್ದಾರೆ. ನಂತರ ಅವರಿಗೆ ಕರೆಯೊಂದು ಬಂದಿದ್ದು, ತನ್ನ ಹೆಸರು ಮೀನಾಕ್ಷಿ ಎಂದು ಪರಿಚಯ ಮಾಡಿಕೊಂಡು ಡಿ.6ರಂದು 21,000 ರು. ಹಣವನ್ನು ಅವರು ಮೀನಾಕ್ಷಿ ಎಂಬಾಕೆ ನೀಡಿದ ಬ್ಯಾಂಕ್ ಖಾತೆಗೆ ವರ್ಗಾಹಿಸಿದ್ದಾರೆ. ಡಿ.15ರಂದು ಅಕ್ಷರಗೌಡ ಎಂಬವರು ಆನಂದ ಉನ್ನಿಕೃಷ್ಣರವರ ಅಸಿಸ್ಟೆಂಟ್ ಎಂದು ಹೇಳಿ ಟ್ರೇಡ್ ಮಾಡುವ ಬಗ್ಗೆ ಮಾಹಿತಿ ನೀಡಿದ್ದು ಅದರಂತೆ ವಾಟ್ಸಪ್ ಮೇಸೆಜ್ ಕಳುಹಿಸಿದ್ದು ಅದರಲ್ಲಿ ಟ್ರೇಡ್ ಮಾಡುವ ಬಗ್ಗೆ ಮಾಹಿತಿ ನೀಡುತ್ತಾ ಹೆಚ್ಚಿನ ಹಣ ನೀಡುವುದಾಗಿ ಹೇಳಿದ್ದಾರೆ. ಡಿ.18ರಂದು ಆರೋಪಿತನ ಖಾತೆಗೆ 3,00,000 ರು. ಹಣವನ್ನು ಅವರು ತಿಳಿಸಿದಂತೆ ಹಣ ವರ್ಗಾವಣೆ ಮಾಡಿದ್ದು, ನಂತರ ನಿಮಗೆ ಹೆಚ್ಚಿನ ಹಣ ನೀಡುವುದಾಗಿ ಹೇಳಿ ಡಿ.26ರಂದು ಆರೋಪಿತನ ಖಾತೆಗೆ 7,00,000 ರು. ಹಣವನ್ನು ಅವರು ತಿಳಿಸಿದಂತೆ ಹಣ ವರ್ಗಾವಣೆ ಮಾಡಿದ್ದಾರೆ. 2026ರ ಜ.6ರಂದು ಆರೋಪಿತನ ಖಾತೆಗೆ 3,00,000 ರು. ಹಣವನ್ನು ವರ್ಗಾಯಿಸಿದ್ದಾರೆ. ಜ.12ರಂದು 5,60,000 ರು. ಹಣವನ್ನು ವರ್ಗಾಯಿಸಿದ್ದಾರೆ. ಈ ರೀತಿಯಲ್ಲಿ ಬೇರೆ ಬೇರೆ ದಿನದಂತೆ ಬೇರೆ ಬೇರೆ ಖಾತೆಗೆ ಒಟ್ಟು 18,81,000 ರು. ಹಣವನ್ನು ಹಾಕಿಸಿ 1 ಕೋಟಿ ರೂಪಾಯಿ ಹೆಚ್ಚಿನ ಹಣವನ್ನು ನೀಡುವುದಾಗಿ ನಂಬಿಸಿ, ಯಾವುದೇ ಲಾಭವನ್ನು ನೀಡದೆ ವಂಚಿಸಿದ್ದಾರೆ ಎಂದು ಆರೋಪಿಸಲಾಗಿದೆ. ಈ ಬಗ್ಗೆ ಕಂಕನಾಡಿ ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಬೆಂಗಳೂರು ಪೊಲೀಸರಿಂದ ಮಂಗಳೂರಿನಲ್ಲಿ ತನಿಖೆ

• **ಕನ್ನಡಪ್ರಭ ವಾರ್ತೆ** ಮಂಗಳೂರು

ಬೆಂಗಳೂರಿನಲ್ಲಿ ನಡೆದ ಚಿನ್ನಾಭರಣ ಕಳವು ಪ್ರಕರಣಕ್ಕೆ ಸಂಬಂಧಿಸಿದಂತೆ ಬೆಂಗಳೂರು ಪೊಲೀಸರು ಮಂಗಳೂರಿನ ಜ್ಯುವೆಲ್ಲರಿಯೊಂದರಲ್ಲಿ ತನಿಖೆ ನಡೆಸಿದ್ದಾರೆ.

ಬೆಂಗಳೂರಿನ ಬ್ಯಾಡರಹಳ್ಳಿ ಠಾಣಾ ವ್ಯಾಪ್ತಿಯಲ್ಲಿ ಶಂಕರ್‌ಶ್ಯಾಮ್ ಸುಂದರ್‌ಎಂಬವರ ಮನೆಯವರು ಕಾಶಿಗೆ ತೆರಳಿದ್ದ ವೇಳೆ ಕಿಟಕಿ ಬಾಗಿಲು ಮುರಿದು ಒಳ ನುಗ್ಗಿದ ಕಳ್ಳರು 1.96 ಕೋಟಿ ರು. ಮೌಲ್ಯದ 783 ಗ್ರಾಂ. ಚಿನ್ನ, 10 ಲಕ್ಷ ರು.ನಗದು ಕಳವು ಮಾಡಿದ್ದರು. ಅಂತರಾಜ್ಯ ಕಳ್ಳ ದೊಡ್ಡಬಳ್ಳಾಪುರದ ಗಂಗಾಧರ್‌ಮತ್ತು ಆತನ ಇಬ್ಬರು ಸಹಚರರು ಈ ಕಳ್ಳತನ ಕೃತ್ಯ ನಡೆಸಿದ್ದರು.

ಆರೋಪಿಗಳಲ್ಲಿ ಒರ್ವನಾದ ದೊಡ್ಡಬಳ್ಳಾಪುರದ ಗಂಗಾಧರ್ ಕಳವು ಮಾಡಿದ ಚಿನ್ನವನ್ನು ಬೆಂಗಳೂರಿನಲ್ಲಿ ಜ್ಯುವೆಲ್ಲರಿ ಹೊಂದಿರುವ ಹೊಂದಿರುವ ಮಂಗಳೂರು ಮೂಲದ ವ್ಯಕ್ತಿಯಲ್ಲಿ ಮಾರಾಟ ಮಾಡಲು ತಿಳಿಸಿದ್ದು, ಆತ ತನ್ನ ಪರಿಚಯದ ರಥಬೀದಿಯ ಜ್ಯುವೆಲ್ಲರಿ ಮಾಲಕರಿಗೆ 54 ಲಕ್ಷ ರು.ಗೆ ಮಾರಾಟ ಮಾಡಿ, ತನ್ನ ಪಾಲಿನ ಹಣ ಪಡೆದು ಉಳಿದ ಹಣವನ್ನು ಗಂಗಾಧರ್‌ಗೆ ನೀಡಿದ್ದ.

ಈ ನಡುವೆ ಚಿಕ್ಕಮಗಳೂರಿನ ಲಕ್ಕವಳ್ಳಿ ಠಾಣಾ ವ್ಯಾಪ್ತಿಯಲ್ಲಿ ನಡೆದ ಕಳ್ಳತನ ಪ್ರಕರಣವೊಂದರಲ್ಲಿ ಗಂಗಾಧರನನ್ನು ಅಲ್ಲಿನ ಪೊಲೀಸರು ಬಂಧಿಸಿ, ವಿಚಾರಣೆ ನಡೆಸಿದಾಗ ಬೆಂಗಳೂರಿನ ಮನೆ ಕಳ್ಳತನ ಪ್ರಕರಣ ಬೆಳಕಿಗೆ ಬಂದಿದೆ. ಅದರಂತೆ ಬೆಂಗಳೂರು ಪೊಲೀಸರು ಆತನನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದ್ದು, ಈ ವೇಳೆ ಆತ ಇನ್ನಷ್ಟು ಮಾಹಿತಿ ನೀಡಿದ್ದಾನೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಬೆಂಗಳೂರು ಪೊಲೀಸರು ರಥಬೀದಿಯ ಜ್ಯುವೆಲ್ಲರಿ ಮಾಲಕರಿಗೆ ನೋಟೀಸ್ ನೀಡಿದ್ದರು. ಮಾಲಕ ನಾಪತ್ತೆಯಾಗಿದ್ದು, ಸರ್ಚ್ ವಾರಂಟ್ ಸಹಿತ ಸೋಮವಾರ ಸಂಜೆ ಬೆಂಗಳೂರು ಪೊಲೀಸರು ಮಂಗಳೂರಿಗೆ ಆಗಮಿಸಿ ಜ್ಯುವೆಲ್ಲರಿ ಶೋಧ ನಡೆಸಿ, ಸಿಬ್ಬಂದಿ ಹಾಗೂ ಇತರರನ್ನು ವಿಚಾರಣೆ ನಡೆಸಿದ್ದಾರೆ.

ಬಳಂಜ ಪಂಚಲಿಂಗೇಶ್ವರ ದುರ್ಗಾಪರಮೇಶ್ವರಿ ಕ್ಷೇತ್ರ: ಭಜನಾ ಸತ್ಸಂಗ

• **ಕನ್ನಡಪ್ರಭವಾರ್ತೆ** ಬೆಳ್ತಂಗಡಿ

ಬಳಂಜ ಶ್ರೀ ಪಂಚಲಿಂಗೇಶ್ವರ ಶ್ರೀ ದುರ್ಗಾಪರಮೇಶ್ವರಿ ಕ್ಷೇತ್ರದಲ್ಲಿ ಡಾ.ಸೋನಾ ರಾಮ್ ಮತ್ತು ಶಕ್ತಿ ರಾಮ್ ಅವರು ತಮ್ಮ ಭಕ್ತಾದಿಗಳ ತಂಡದೊಂದಿಗೆ ದೇವಸ್ಥಾನಕ್ಕೆ ಆಗಮಿಸಿ ಭಜನಾ ಸತ್ಸಂಗವನ್ನು ನೆರವೇರಿಸಿದರು.

ಡಾ ಸೋನಾ ರಾಮ್ ಮತ್ತು ಶಕ್ತಿ ರಾಮ್ ಅವರು ದುಬೈಯಲ್ಲಿ ಸಾವಿರಾರು ಭಾರತೀಯರಿಗೆ ಉದ್ಯೋಗದಾತರಾಗಿದ್ದು, ದುಬೈನಂತಹ ದೇಶದಲ್ಲಿ ತಮಿಳ್ ರೇಡಿಯೋವನ್ನು ಕಳೆದ ಒಂದು ದಶಕಗಳಿಂದ ನಡೆಸಿಕೊಂಡು ಬರುತ್ತಿದ್ದಾರೆ. ತಮಿಳುನಾಡಿನ ಶಿವಕಾಶಿ, ಮಧುರೈ ಮೀನಾಕ್ಷಿ ದೇವಸ್ಥಾನ ಸೇರಿದಂತೆ ಅನೇಕ ಧಾರ್ಮಿಕ ಸಂಸ್ಥೆಗಳಿಗೆ ಪೋಷಕರಾಗಿದ್ದಾರೆ. ಬಳಂಜ ದೇವಳದಲ್ಲಿ ಸುಮಾರು 50 ಜನರ ತಂಡ ಆಗಮಿಸಿ ಸತ್ಸಂಗ ನೆರವೇರಿಸಿದರು.

ಕ್ಷೇತ್ರದ ವತಿಯಿಂದ ಅವರನ್ನು ಆಡಳಿತ ಮೊಕ್ತೆಸರ ಶೀತಲ್ ಪಡಿವಾಳ್, ಜೀರ್ಣೋದ್ಧಾರ ಸಮಿತಿ ಅಧ್ಯಕ್ಷ ಸತೀಶ್ ರೈ ಬಾರ್ದಡ್ಕ, ಗುರು ಹೆಗ್ಡೆ, ಪ್ರಭಾಕರ ಹೆಗ್ಡೆ ಕೋಡಿ, ಚಂದ್ರಶೇಖರ ಪಿ.ಕೆ, ದಿನೇಶ್ ಪಿ.ಕೆ, ಜಗದೀಶ್ ರೈ, ವಿನು ಬಳಂಜ, ಸಂತೋಷ್ ಸಾಲಿಯಾನ್ ಕಾಪಿನಡ್ಕ, ಚಿತ್ತರಂಜನ್ ಹೆಗ್ಡೆ, ರತ್ನರಾಜ್ ಜೈನ್ ಪೇರಂದಬೈಲ್, ಗಣೇಶ್ ಬೊಂಟ್ರೊಟ್ಟು, ಸದಾನಂದ ಬೊಂಟ್ರೊಟ್ಟು, ಮನೋಹರ್‌ಬಳಂಜ, ಸುನಂದ ಕುಳೆಂಜಿರೋಡಿ ಗುತ್ತು, ಸತೀಶ್ ಶೆಟ್ಟಿ ಕುರೇಲ್ಯ, ಅರ್ಚಕರಾದ ಸುರೇಶ್ ಭಟ್, ಮಂಜುನಾಥ್ ಭಟ್, ವಿಕ್ರಮ್ ಭಟ್, ಮತ್ತು ಊರವರು ಸ್ವಾಗತಿಸಿದರು. ಕ್ಷೇತ್ರದ ವತಿಯಿಂದ ಭಜನಾ ತಂಡವನ್ನು ಗೌರವಿಸಲಾಯಿತು. ಉದ್ಯಮಿ ಅಶ್ವಥ್ ಹೆಗ್ಡೆ ನೇತೃತ್ವ ವಹಿಸಿದ್ದರು.